ಸಂಪುಟ : 10 ಸಂಚಿಕೆ: 157 ಪುಟ : 4+2 ಬೆಲೆ: 3.00 ಶನಿವಾರ ಜುಲೈ 26 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ

Volume : 10 Issue : 157 Pages : 4+2 Price : 3.00 Saturday July 26 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25




## ಬಾಳೆ ಬೆಳೆಗೆ ಬರುವ ರೋಗ ನಿಯಂತ್ರಣ

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ ಶಿರಹಟ್ಟಿ/ಲಕ್ಷ್ಮೇಶ್ವರ ತಾಲೂಕಿನಲ್ಲಿ ಬಾಳೆ ಬೆಳೆ 200 ಹೆಕ್ಟೇರ್ ಕ್ಷೇತ್ರವಿದ್ದು, ಇತ್ತೀಚಿನ ದಿನಮಾನಗಳಲ್ಲಿ ಬಾಳೆ ಬೆಳೆಗೆ ವಿವಿಧ ರೋಗಗಳು ಕಂಡು ಬರುತ್ತಿದ್ದು, ಇದರಲ್ಲಿ ಸಿಗಟೋಕ/ಪನಾಮ ಸೊರಗು ರೋಗ ಮತ್ತು ಪೊಟ್ಯಾಸಿಯಮ್ ಕೊರತೆ ಹೆಚ್ಚಾಗಿ ಕಂಡು ಬರುತ್ತಿದ್ದು, ಈ ರೋಗವನ್ನು ನಿಯಂತ್ರಿಸಲು ಈ ಕೆಳಗಿನ ಔಷಧಿಗಳ ಉಪಚಾರದಿಂದ ರೋಗವನ್ನು ನಿಯಂತ್ರಣ ಮಾಡಬಹುದಾಗಿದೆ ಎಂದು

ಶಿರಹಟ್ಟಿಯ ತೋಟಗಾರಿಕೆಯ ಹಿರಿಯ ಸಹಾಯಕ (ಜಿ.ಪಂ) ನಿರ್ದೇಶಕರಾದ ಪ್ರಶಾಂತ ಆರ್ ಕುಲಕರ್ಣಿ ಪತ್ರಿಕಾ ಪ್ರಕಟಣೆ ಮೂಲಕ ತಿಳಿಸಿದ್ದಾರೆ.

ಸಿಗಟೋಕ ಪನಾಮ ಸೊರಗು ರೋಗ ಮತ್ತು ಪೊಟ್ಯಾಸಿಯಮ್ ಕೊರತೆಯನ್ನು ನಿಯಂತ್ರಿಸುವ ಔಷಧಿಗಳು ಕವಚ 2.5 ಗ್ರಾಂ/ಲೀಟರ್ 7 ದಿನಗಳ ನಂತರ 2 ಬಾರಿ ಸಿಂಪಡಿಸುವುದು 1 ಮಿಲೀ/ಲೀಟರ್ 7 ದಿನಗಳ ನಂತರ 2 ಬಾರಿ ಸಿಂಪಡಿಸುವುದು ಪೊಟ್ಯಾಶ್ ಕೊರತೆ–5 ಗ್ರಾಂ/ಲೀಟರ್– 0:0:50 ದ್ರವ ಗೊಬ್ಬರ –100 ಗ್ರಾಂ ಒಂದು ಗಿಡಕ್ಕೆ ಸಿಂಪಡಿಸುವುದು ಕಾಂಡಕೊಳೆ ರೋಗಕ್ಕೆ ತುತ್ತಾದ ಕಂದುಗಳ ಹೊರ ಕವಚದ ಎಲೆಗಳನ್ನು ತೆ–ಗೆದು ಹಾಕಿ ನಂತರ ಅವುಗಳನ್ನು ಬೋರ್ಡೋ ಪೇಸ್ಟಿನಿಂದ ಉಪಚರಿಸಬೇಕು ಎಂದು ತೋಟಗಾರಿಕೆ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಕೇಂದ್ರ ಸರ್ಕಾರದ ಬುಡಕಟ್ಟು ವ್ಯವಹಾರಗಳ ಸಚಿವರಾಲಯದ Darti Aaba Janjatiya Gram Utkarsh Abhiyan ( DA- JGUA) ಯೋಜನೆಯಡಿ ಗುರುತಿಸಿರುವ ಬುಡಕಟ್ಟು ಗ್ರಾಮಗಳಲ್ಲಿ ಪ್ರವಾಸಿಗರಿಗೆ ಅನುಕೂಲವಾಗುವಂತೆ ಹೋಂ ಸ್ಟೇ ಸ್ಥಾಪಿಸಲು ರೂ.5.00 ಲಕ್ಷಗಳ ಸಹಾಯಧನವನ್ನು ಹಾಗು ಹೋಂ ಸ್ಟೇ ನವೀಕರಿಸಲು ರೂ.3.00 ಲಕ್ಷಗಳ ಸಹಾಯಧನವನ್ನು ನೀಡುವ ಸಂಬಂಧ ಪ್ರವಾಸೋದ್ಯಮ ಇಲಾಖೆಯಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅರ್ಜಿದಾರರು ಪರಿಶಿಷ್ಟ ಪಂಗಡಕ್ಕೆ ಸೇರಿದವರಾಗಿರಬೇಕು. ಅರ್ಜಿದಾರರು ಗದಗ ಜಿಲ್ಲೆಯಿಂದ ಧರ್ತಿ ಆಬಾ ಜನಜಾತೀಯ ಗ್ರಾಮ ಉತ್ಕರ್ಷ ಅಭಿಯಾನ ಕಾರ್ಯಕ್ರಮದಡಿ ಅದರ ಅಕ್ಕಪಕ್ಕದ ಗ್ರಾಮದ ನಿವಾಸಿಯಾಗಿರಬೇಕು.

**ಯೋಜನೆಯಡಿ ಆಯ್ಕೆಯಾದ ಗ್ರಾಮಗಳ ವಿವರ** : ಗದಗ ಜಿಲ್ಲೆಯ ರೋಣ ತಾಲೂಕಿನ ಮೇಲ್ಮಠ , ಲಕ್ಷ್ಮೇಶ್ವರ ತಾಲೂಕಿನ ಒಡೆಯರ ಮಲ್ಲಾಪುರ, ಶಿರಹಟ್ಟಿ ತಾಲೂಕಿನ ಭಾವನೂರ, ಮುಂಡರಗಿ ತಾಲೂಕಿನ ಕೆಲೂರ.

ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ ಆಗಸ್ಟ್ 5 ಆಗಿದ್ದು ಅರ್ಜಿ ಹಾಗೂ ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರ ಕಚೇರಿ, ಪ್ರವಾಸೋದ್ಯಮ ಇಲಾಖೆ, ಎ.ಸಿ. ಕಚೇರಿ ಕಟ್ಟಡ, ಗದಗ ಜಿಲ್ಲೆ , ಗದಗ ದೂರವಾಣಿ ಸಂಖ್ಯೆ : 08372–233017, 9844269430, 9916164422 ಸಂಪರ್ಕಿಸಬಹುದಾಗಿದೆ.

### ನಾಗರಿಕರ ಆರ್ಥಿಕ, ಸಾಮಾಜಿಕ ಸ್ಥಿತಿಗತಿಯ ಮಾಹಿತಿ ಅತ್ಯಗತ್ಯ: ಸಿಎಂ ಸಿದ್ದರಾಮಯ್ಯ

# ರಾಜ್ಯದಲ್ಲಿ ಮರುಗಣತಿ ಮಾಡಲು ಕ್ರಮ

■ ವಿಜಯಸಾಕ್ಷಿ ಸುದ್ದಿ, ನವದೆಹಲಿ

ಹಿಂದುಳಿದವರನ್ನು ಸಮಾಜದ ಮುಖ್ಯವಾಹಿನಿಗೆ ತರಲು ಸಮೀಕ್ಷೆ ಅನಿವಾರ್ಯವಾಗಿದ್ದು, ಈ ದಿಸೆಯಲ್ಲಿ ದೇಶದ ಪ್ರತಿ ನಾಗರಿಕನ ಆರ್ಥಿಕ ಸಾಮಾಜಿಕ, ಶೈಕ್ಷಣಿಕ, ರಾಜಕೀಯ ಸ್ಥಿತಿಗತಿಯ ಮಾಹಿತಿ ಅತ್ಯಗತ್ಯವಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಅವರು ಶುಕ್ರವಾರ ನವದೆಹಲಿಯ ಕರ್ನಾಟಕ ಭವನದಲ್ಲಿ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದರು.

ಪ್ರತಿಯೊಬ್ಬ ಪ್ರಜೆಯ ಆರ್ಥಿಕ, ಸಾಮಾಜಿಕ, ಶೈಕ್ಷಣಿಕ, ರಾಜಕೀಯ ಹಾಗೂ ಔದ್ಯೋಗಿಕ ಸ್ಥಿತಿಗತಿಗಳ ಬಗ್ಗೆ ಮಾಹಿತಿ ಪಡೆಯುವುದು ಅತ್ಯಗತ್ಯ. ಸಾಮಾಜಿಕ ಆರ್ಥಿಕ ಸಮೀಕ್ಷೆ ನಡೆಸಬೇಕೆಂದು ರಾಹುಲ್ ಗಾಂಧಿಯವರು ಬದ್ಧರಾಗಿದ್ದಾರೆ. ಕೇವಲ ಜಾತಿಗಣತಿ ಮಾಡುವ ಜೊತೆಗೆ ಆರ್ಥಿಕ, ಸಾಮಾಜಿಕ ಸಮೀಕ್ಷೆ ನಡೆಸಿದಾಗ ಮಾತ್ರ ಹಿಂದುಳಿದವರನ್ನು ಸಮಾಜದ ಮುಖ್ಯವಾಹಿನಿಗೆ ತರಲು ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ಎಐಸಿಸಿನ ಓಬಿಸಿ ಸಲಹಾ ಮಂಡಳಿಯಲ್ಲಿ ನಾನು ಓರ್ವ ಸದಸ್ಯನಾಗಿದ್ದು, ಜುಲೈ 15 ಹಾಗೂ 16ರಂದು ಬೆಂಗಳೂರಿನಲ್ಲಿ ಮಂಡಳಿಯ ಪ್ರಥಮ ಸಭೆ ನಡೆದಿತ್ತು. ಸಭೆಯಲ್ಲಿ ಬೆಂಗಳೂರು ಘೋಷಣೆ ಸೇರಿದಂತೆ ಮೂರು




ಪ್ರಮುಖ ನಿರ್ಣಯಗಳನ್ನು ಕೈಗೊಳ್ಳಲಾಯಿತು. 2015ರಲ್ಲಿ ಸಾಮಾಜಿಕ ಆರ್ಥಿಕ ಸಮೀಕ್ಷೆಯನ್ನು ಪ್ರಾರಂಭಿಸಿದ ರಾಜ್ಯ ಕರ್ನಾಟಕ. 2018ರಲ್ಲಿ ಸಮ್ಮಿಶ್ರ ಸರ್ಕಾರದ ಅವಧಿಯಲ್ಲಿ ಈ ಜಾತಿಗಣತಿ ವರದಿಯನ್ನು ಗಣನೆಗೆ ತೆಗೆದುಕೊಳ್ಳಲಿಲ್ಲ.

> ಭಾರತ ಸರ್ಕಾರವು ಯೂರಿಯಾ ಮತ್ತಿತರ ರಸಗೊಬ್ಬರಗಳನ್ನು ಎಲ್ಲಾ ರಾಜ್ಯಗಳಿಗೆ ಸರಬರಾಜು ಮಾಡಬೇಕು. ಈ ವರ್ಷ ಭಾರತ ಸರ್ಕಾರವು ಸರಬರಾಜು ಮಾಡಿರುವ ರಸಗೊಬ್ಬರವು ಸಾಕಾಗುತ್ತಿಲ್ಲ. ರಾಜ್ಯದಲ್ಲಿ ಮುಂಗಾರು ಅವಧಿಗೂ ಮುನ್ನವೇ ಪ್ರಾರಂಭವಾಗಿದೆ. ಕಳೆದ ವರ್ಷಕ್ಕೆ ಹೋಲಿಸಿದರೆ ಬಿತ್ತನೆ ಈ ವರ್ಷ ಹೆಚ್ಚಾಗಿದೆ. ಜಲಾನಯನ ಪ್ರದೇಶಕ್ಕೆ ನೀರನ್ನು ಈಗಾಗಲೇ ಹಾಯಿಸಲಾಗಿದೆ. ಹಾಗಾಗಿ ರೈತರು ಹೆಚ್ಚು ರಸಗೊಬ್ಬರವನ್ನು ಬಳಸುತ್ತಿದ್ದಾರೆ. ರಾಜ್ಯಕ್ಕೆ ಹೆಚ್ಚಿನ ರಸಗೊಬ್ಬರದ ಅಗತ್ಯವಿದೆ ಎಂದು ಜೆ.ಪಿ. ನಡ್ಡಾ ಅವರಿಗೆ ಪತ್ರ ಬರೆದಿರುವುದಾಗಿ ಮುಖ್ಯಮಂತ್ರಿಗಳು ವಿವರಿಸಿದರು.

ಹತ್ತು ವರ್ಷಗಳ ಹಳೆಯ ಅಂಕಿ–ಅಂಶಗಳಾದ್ದರಿಂದ ಕಾನೂನಿನನ್ವಯ ಮರುಗಣತಿ ಮಾಡುವ ಅಗತ್ಯವಿದ್ದು, ಸರ್ಕಾರ ಕರ್ನಾಟಕದಲ್ಲಿ ಮರುಗಣತಿ ಮಾಡಲು ಕ್ರಮ ಕೈಗೊಳ್ಳುತ್ತಿದೆ. ಈ ಸಮೀಕ್ಷೆ ಕೇವಲ ಓಬಿಸಿ ವರ್ಗಕ್ಕೆ ಸಂಬಂಧಿಸಿದ್ದಲ್ಲ. ಕರ್ನಾಟಕ ಎಲ್ಲ ಏಳು ಕೋಟಿ ಜನರ ಸಮೀಕ್ಷೆ ನಡೆಯುತ್ತದೆ ಎಂದರು.

ಎಐಸಿಸಿ–ಒಬಿಸಿ ಸಭೆ ಸಭೆಯ ▶▶ 3ನೇ ಪುಟಕ್ಕೆ

### ವಕ್ಫ್ ಬೋರ್ಡ್ ಅಧ್ಯಕ್ಷ ಹಾಪೀಜ್ ಸೈಯದ್ ಮೊಹಮ್ಮದ ಅಲಿಯವರಿಗೆ ಸನ್ಮಾನ

# ದೂದಪೀರಾಂ ದರ್ಗಾ ಅಭಿವೃದ್ಧಿಗೆ ನೆರವು

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ದೇಶ–ವಿದೇಶಗಳಲ್ಲಿ ಭಾವೈಕ್ಯತೆಯ ಕೇಂದ್ರವೆಂದು ಪ್ರಸಿದ್ಧಿಯಾಗಿರುವ ಲಕ್ಷ್ಮೇಶ್ವರ ಪಟ್ಟಣದ ದೂದಪೀರಾಂ ದರ್ಗಾ ಅಭಿವೃದ್ಧಿಗೆ ವಕ್ಫ್ ಮಂಡಳಿಯಿಂದ ಹಾಗೂ ಸರಕಾರದಿಂದ ಅವಶ್ಯವಿರುವ ಎಲ್ಲ ನೆರವುಗಳನ್ನು ದೊರಕಿಸಿಕೊಡಲು ಪ್ರಾಮಾಣಿಕ ಪ್ರಯತ್ನ ಮಾಡುವದಾಗಿ ರಾಜ್ಯ ವಕ್ಫ್ ಬೋರ್ಡ್ ಮಂಡಳಿ ಅಧ್ಯಕ್ಷ ಹಾಪೀಜ್ ಸೈಯದ್ ಮೊಹಮ್ಮದ ಅಲಿ ಅಲ್ ಹುಸೈನಿ ಭರವಸೆ ನೀಡಿದರು.

ಅವರು ಶುಕ್ರವಾರ ಪಟ್ಟಣದ ದೂದಪೀರಾಂ ದರ್ಗಾದ ಶಾದಿಮಹಲ್‌ನಲ್ಲಿ ರಾಜ್ಯ ವಕ್ಫ್ ಮಂಡಳಿಯ ನೂತನ ಅಧ್ಯಕ್ಷರಾಗಿ ಆಯ್ಕೆಯಾದ ಹಿನ್ನೆಲೆಯಲ್ಲಿ ಪಟ್ಟಣದ ದೂದಪೀರಾಂ ದರ್ಗಾ ಕಮಿಟಿ ಮತ್ತು ಅಂಜುಮನ್ ಎ–ಇಸ್ಲಾಂ ಕಮಿಟಿಯವರು ನೀಡಿದ ಸನ್ಮಾನ ಸ್ವೀಕರಿಸಿ ಮಾತನಾಡಿದರು.

ದರ್ಗಾಕ್ಕೆ ತನ್ನದೇ ಆದ ವೈಶಿಷ್ಟ್ಯತೆಯಿದೆ. ದರ್ಗಾಗಳಲ್ಲಿ, ಮುತ್ತುವಲ್ಲಿಗಳಾಗಲಿ, ಕಮಿಟಿಗಳಾಗಲಿ ಎಲ್ಲಿಯೇ ಕಾರ್ಯ ನಿರ್ವಹಿಸಿದರೂ ಪ್ರಾಮಾಣಿಕವಾಗಿ, ಪಾರದರ್ಶಕವಾಗಿ ಕಾರ್ಯನಿರ್ವಹಿಸಬೇಕು. ಇವೆಲ್ಲದಕ್ಕೂ ವಕ್ಫ್ ಬೋರ್ಡ್ ಜವಾಬ್ದಾರಿಯಾಗಿರುತ್ತದೆ ಎನ್ನುವದನ್ನು




ಗಮನದಲ್ಲಿ ರಿಸಿಕೊಳ್ಳಬೇಕು. ಎಲ್ಲ ಕಡೆಗಳಲ್ಲಿ ಅಲ್ಲಿನ ಕಮಿಟಿಯವರು ಸಾಕಷ್ಟು ಬೇಡಿಕೆಗಳನ್ನು ಇಡುವದು ಸಹಜ. ಆದರೆ ಬೇಡಿಕೆಗಳನ್ನು ಆದ್ಯತಾನುಸಾರ ಈಡೇರಿಸುವ ನಿಟ್ಟಿನಲ್ಲಿ ಕ್ರಮ ವಹಿಸುತ್ತೇವೆ. ವಕ್ಫ್ ಮಂಡಳಿ ರಾಜ್ಯದ ಬಹುದೊಡ್ಡ ಕಮಿಟಿಯಾಗಿದ್ದು, ಅದರ ಮಂಡಳಿ ಅಧ್ಯಕ್ಷನನ್ನಾಗಿ ನೇಮಕ ಮಾಡಿರುವದಕ್ಕೆ ಎಲ್ಲರಿಗೂ ಧನ್ಯವಾದಗಳನ್ನು ಅರ್ಪಿಸುತ್ತೇನೆ ಎಂದು ಹೇಳಿದರು.

ವಿಧಾನಪರಿಷತ್ ಸದಸ್ಯ ಸಲೀಂ ಅಹ್ಮದ್ ಮಾತನಾಡಿ, ಮುಖ್ಯಮಂತ್ರಿ ಸಿದ್ದರಾಮಯ್ಯರೊಂದಿಗೆ ಚರ್ಚಿಸಿ ಆರ್ಥಿಕ ನೆರವು ದೊರಕಿಸಿಕೊಡುವ ಭರವಸೆ ನೀಡಿದರು. ವೇದಿಕೆಯಲ್ಲಿ ಆಶೀಫಅಲಿ ಹೀರಾಹುಸೇನ್, ಕೆಪಿಸಿಸಿ ಕಾರ್ಯದರ್ಶಿ ಸುಜಾತಾ ದೊಡ್ಡಮನಿ, ಪುರಸಭೆ

> ಹಾವೇರಿ ಲೋಕಸಭಾ ಕ್ಷೇತ್ರದ ಯುವ ಮುಖಂಡ, ಕೆಪಿಸಿಸಿ ಸದಸ್ಯ ಆನಂದಸ್ವಾಮಿ ಗಡ್ಡದೇವರಮಠ ಮಾತನಾಡಿ, ಎಲ್ಲ ಸಮಾಜಗಳೊಂದಿಗೆ ಹೊಂದಿಕೊಂಡು ಸಾಗುವ ನಿಟ್ಟಿನಲ್ಲಿ ಮುಂದಾಗಬೇಕು. ಮುಸ್ಲಿಂ ಸಮಾಜದವರು ಒಗ್ಗಟ್ಟಿನಿಂದ ಎಲ್ಲ ಕಾರ್ಯಗಳನ್ನು ಮಾಡುತ್ತಿರುವದು ಶ್ಲಾಘನೀಯ. ಈಗಾಗಲೇ ಲಕ್ಷ್ಮೇಶ್ವರಕ್ಕೆ ಅಲ್ಪ ಸಂಖ್ಯಾತರ ಇಲಾಖೆಯಿಂದ 2 ಕೋಟಿ ರೂ ಅನುದಾನ ಬಿಡುಗಡೆಯಾಗಿದೆ ಎಂದು ಹೇಳಿದರು.

ಅಧ್ಯಕ್ಷೆ ಯಲ್ಲವ್ವ ದುರಗಣ್ಣವರ, ಉಪಾಧ್ಯಕ್ಷ ಪೀರದೋಷ ಆಡೂರ, ಸ್ಥಾಯಿ ಸಮಿತಿ ಅಧ್ಯಕ್ಷ ವಿಜಯ ಕರಡಿ, ಜಯಕ್ಕ ಕಳ್ಳಿ, ಹುಮಾಯೂನ್ ಮಾಗಡಿ, ಎಂ.ಎಂ. ಗದಗ, ಡಾ. ಅಬ್ದುಲ್‌ಕರೀಂ ಪಟವೇಗಾರ, ಸುಲೇಮಾನ ಕಣಕೆ, ಸೈಯದ್‌ಅಲಿ ಹುಸೇನ್ ಹೈದರಲಿ, ದಿಶಾಂತ ಪಠಾಣ, ಮಾಜಿ ಶಾಸಕ ರಾಮಣ್ಣ ಲಮಾಣಿ, ದಾದಾಪೀರ ಮುಚಾಲೆ, ವೀರಯ್ಯ ಮಠಪತಿ, ಸಾಹೇಬ್‌ಜಾನ್, ಹವಾಲ್ದಾರ್ ನಜೀರ್‌ಅಹ್ಮದ್ ಗದಗ, ಎ.ಜಿ. ಸೂರಣಗಿ, ಕರೀಂಖಾನವರ, ಇಮ್ರಾನ್ ಪೀರಜಾದೆ, ಆಸೀಪ್ ಅಲಿ ಸೇರಿದಂತೆ ದರ್ಗಾ ಹಾಗೂ ಅಂಜುಮನ್ ಕಮಿಟಿಯ ಪದಾಧಿಕಾರಿಗಳು ಮತ್ತು ಸಮಾಜದ ಮುಖಂಡರು ಉಪಸ್ಥಿತರಿದ್ದರು.

### ಪತ್ರಿಕಾಗೋಷ್ಠಿಯಲ್ಲಿ ಸಮಾಜವಾದಿ ಪಕ್ಷದ ರಾಜ್ಯ ಘಟಕದ ಅಧ್ಯಕ್ಷ ಮಂಜಪ್ಪ ಹೇಳಿಕೆ

## ದೇಶದಾದ್ಯಂತ ಪಕ್ಷ ಸಂಘಟನೆಗೆ ಯೋಜನೆ




■ ವಿಜಯಸಾಕ್ಷಿ ಸುದ್ದಿ, ಗದಗ

ಮುಲಾಯಂ ಸಿಂಗ್ ಯಾದವ್ ನಂತರ ಅಖಿಲೇಶ್ ಯಾದವ್ ನೇತೃತ್ವದಲ್ಲಿ ಪಕ್ಷ ದೇಶದಾದ್ಯಂತ ಬಲಿಷ್ಠಗೊಳ್ಳುತ್ತಿದೆ. ಕಳೆದ ಲೋಕಸಭಾ ಚುನಾವಣೆಯಲ್ಲಿ 3ನೇ ಅತಿದೊಡ್ಡ ಪಕ್ಷವಾಗಿ ಹೊರಹೊಮ್ಮಿದೆ. ಈ ನಿಟ್ಟಿನಲ್ಲಿ ಸಮಾಜವಾದಿ ಪಕ್ಷವನ್ನು ದೇಶದಾದ್ಯಂತ ಕಟ್ಟಲು ಯೋಜನೆ ರೂಪಿಸಲಾಗಿದೆ ಎಂದು ಸಮಾಜವಾದಿ ಪಕ್ಷದ ರಾಜ್ಯ ಘಟಕದ ಅಧ್ಯಕ್ಷ ಮಂಜಪ್ಪ ಹೇಳಿದರು.

ನಗರದ ಪತ್ರಿಕಾ ಭವನದಲ್ಲಿ ಶುಕ್ರವಾರ ನಡೆದ ಸುದ್ದಿಗೋಷ್ಠಿಯಲ್ಲಿ ಅವರು ಮಾತನಾಡಿ, ಕರ್ನಾಟಕದಲ್ಲಿ ಮುಂದೆ ಬರುವ ಎಲ್ಲ ಚುನಾವಣೆಯಲ್ಲಿ ನಮ್ಮ ಪಕ್ಷ ಸ್ಪರ್ಧಿಸಲಿದೆ. ಗೋವಿಂದರಾಜ ಕೊಣ್ಣೂರು ಅವರನ್ನು ಚುನಾವಣಾ ಸಮಿತಿಯ ಸಂಚಾಲಕರನ್ನಾಗಿ ನೇಮಿಸಿ, ಈ ಭಾಗದ ಆರು ಜಿಲ್ಲೆಗಳಲ್ಲಿ ಪಕ್ಷ ಸಂಘಟನೆಗೆ ಒತ್ತು ನೀಡಲು ಸೂಚಿಸಲಾಗಿದೆ. ಜಿಲ್ಲಾ ಪಂಚಾಯಿತಿ ಸೇರಿದಂತೆ ಎಲ್ಲ ಚುನಾವಣೆಗಳಲ್ಲಿ ಪಕ್ಷ ಸ್ವತಂತ್ರವಾಗಿ ಸ್ಪರ್ಧಿಸಲಿದೆ ಎಂದರು.

> ಪಿಚ್ರೆ (ಹಿಂದುಳಿದ) ದಲಿತ, ಅಲ್ಪಸಂಖ್ಯಾತ ಪಿಡಿಎ ಮೂಲಕ ಪಕ್ಷ ಸಂಘಟನೆಗೆ ಒತ್ತು ನೀಡಲಾಗಿದೆ. ದೇಶದಲ್ಲಿನ ಎಲ್ಲ ಅಹಿಂದ ವರ್ಗಕ್ಕೂ ಸಮಾನ ಅವಕಾಶಗಳು ಸಿಗಬೇಕು ಎಂಬುದು ನಮ್ಮ ಪಕ್ಷದ ಧ್ಯೇಯವಾಗಿದೆ. ಕೇಂದ್ರ ಸರಕಾರ ಜಾತಿ ಜನಗಣತಿಯನ್ನು ನಿಖರವಾಗಿ ನಡೆಸುವ ಮೂಲಕ ಎಲ್ಲರಿಗೂ ಎಲ್ಲ ಕ್ಷೇತ್ರದಲ್ಲೂ ಸಮಾನ ಅವಕಾಶ ಒದಗಿಸಬೇಕು ಎಂದು ಮಂಜಪ್ಪ ಹೇಳಿದರು.

ಕರ್ನಾಟಕದ ಮಟ್ಟಿಗೆ ಶಿವಮೊಗ್ಗ ಜಿಲ್ಲೆ ಸಮಾಜವಾದಿ ನಾಯಕರ ಉಗಮಸ್ಥಳ. ನಮ್ಮ ಪಕ್ಷದಿಂದ ಹಲವಾರು ನಾಯಕರು ಬೆಳೆದು, ಆನಂತರದಲ್ಲಿ ಬೇರೆ ಬೇರೆ ಪಕ್ಷಗಳಲ್ಲಿ ಗುರುತಿಸಿಕೊಂಡರು. ಜೆ.ಎಚ್. ಪಟೇಲ್, ▶▶ 3ನೇ ಪುಟಕ್ಕೆ


### 'ಶ್ರಾವಣ ಸಂಜೆ' ಕಾರ್ಯಕ್ರಮದ ಸಾನ್ನಿಧ್ಯ ವಹಿಸಿದ ಚನ್ನವೀರ ಶ್ರೀ ಅಭಿಮತ

## ಸತ್ಸಂಗಗಳ ಮೂಲಕ ಬದುಕಿನ ಮೌಲ್ಯ ಹೆಚ್ಚಿಸಿಕೊಳ್ಳಿ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಶ್ರಾವಣ ಮಾಸದ ಪುಣ್ಯಕಾಲದಲ್ಲಿ ಪ್ರತಿಯೊಬ್ಬರೂ ಪುರಾಣ, ಪುಣ್ಯಕಥೆ ಆಲಿಸುವ ಮೂಲಕ ಸನ್ಮಾರ್ಗ, ಧರ್ಮಾಚರಣೆ, ಸತ್ಸಂಗಗಳಲ್ಲಿ ಪಾಲ್ಗೊಂಡು ಬದುಕಿನ ಮೌಲ್ಯ ಹೆಚ್ಚಿಸಿಕೊಳ್ಳಬೇಕು ಎಂದು ಹೂವಿನಶಿಗ್ಲಿಯ ಶ್ರೀ ಚನ್ನವೀರ ಮಹಾಸ್ವಾಮಿಗಳು ಹೇಳಿದರು.

ಅವರು ಶುಕ್ರವಾರ ಪಟ್ಟಣದ ಅಕ್ಕಮಹಾದೇವಿ ದೇವಸ್ಥಾನದಲ್ಲಿ ಶಿದ್ದೇಶ್ವರ ಸತ್ಸಂಗ ಬಳಗ, ಗದಗ ಜಿಲ್ಲಾ ಕದಳಿ ಮಹಿಳಾ ವೇದಿಕೆ, ಲಕ್ಷ್ಮೇಶ್ವರ ತಾಲೂಕು ಶರಣ ಸಾಹಿತ್ಯ ಪರಿಷತ್, ತಾಲೂಕು ಕದಳಿ ಮಹಿಳಾ ವೇದಿಕೆ, ರಾಜರಾಜೇಶ್ವರಿ ಮಹಿಳಾ ಸಾಹಿತ್ಯ ಮತ್ತು ಸಂಸ್ಕೃತಿ ವೇದಿಕೆ ಹಾಗೂ ಅಕ್ಕಾಮಹಾದೇವಿ ಬಳಗ, ಪ್ರೇಮಕ್ಕ ಬಿಂಕದಕಟ್ಟಿ ಅಭಿಮಾನಿ ಬಳಗಗಳ ಸಂಯುಕ್ತಾಶ್ರಯದಲ್ಲಿ ತಿಂಗಳ ಪರ್ಯಂತ ನಡೆಯುವ 20ನೇ ವರ್ಷದ 'ಶ್ರಾವಣ ಸಂಜೆ' ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದರು.



ಪ್ರಸ್ತುತ ದೂರದರ್ಶನ, ಮೊಬೈಲ್, ಕಂಪ್ಯೂಟರ್ ಪ್ರಭಾವದಿಂದ ಪುರಾಣ ಪ್ರವಚನಗಳಿಂದ ದೂರ ಸರಿಯುತ್ತ, ಧಾರ್ಮಿಕ ಮನೋಭಾವ ಕಡಿಮೆಯಾಗುತ್ತಿದೆ. ಈ ಸಂದಿಗ್ಧ ಪರಿಸ್ಥಿತಿಯಲ್ಲಿ ಮಹಿಳಾ ಬಳಗದವರು ಕೈಗೊಳ್ಳುವ ಸತ್ಸಂಗ, ಧಾರ್ಮಿಕ, ಸಾಮಾಜಿಕ, ಸಾಂಸ್ಕೃತಿಕ ಕಾರ್ಯಕ್ರಮಗಳು ಉತ್ತಮ ವೇದಿಕೆಗಳಾಗಿವೆ. ಪ್ರತಿಯೊಬ್ಬರೂ ತಮ್ಮ ನಿತ್ಯದ ಬದುಕಿನ ಜಂಜ–ಾಟದ ನಡುವೆ ಇಂತಹ ಉತ್ತಮ ಕಾರ್ಯಕ್ರಮಗಳಲ್ಲಿ ಪಾಲ್ಗೊಳ್ಳಬೇಕು. ಅನೇಕ ಮಹಾತ್ಮರು, ಪುಣ್ಯಪುರುಷರು,

> ಅಧ್ಯಕ್ಷತೆ ವಹಿಸಿದ್ದ ಹಿರಿಯ ನ್ಯಾಯವಾದಿ ವಿ.ಎಲ್. ಪೂಜಾರ ಮಾತನಾಡಿ, ಕೃಷಿ ಪ್ರಧಾನ ನಾಡಿನಲ್ಲಿ ಶ್ರಾವಣ ಮಾಸದಲ್ಲಿ ನಡೆಯುವ ಹಬ್ಬ, ಆಚರಣೆ, ಸಂಪ್ರದಾಯ, ಧರ್ಮಕಾರ್ಯ, ಪುರಾಣ–ಪ್ರವಚನ ಕೇಳುವ ಮೂಲಕ ಉತ್ತಮ ಮೌಲ್ಯಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದರು.

ಶರಣರು, ಸಂತರು, ಕಾಯಕ ಯೋಗಿಗಳ ಚಿಂತನೆ, ಆದರ್ಶ ಮೌಲ್ಯಗಳನ್ನು ಬದುಕಿನಲ್ಲಿ ಅಳವಡಿಸಿಕೊಳ್ಳಬೇಕು ಎಂದು ಹೇಳಿದರು.

ಅಗಡಿ ಕಾಲೇಜಿನ ಉಪನ್ಯಾಸಕ ಸಿ.ಎಸ್. ಹಿರೇಮಠ ಮಾತೆಂಬುದು ಜ್ಯೋತಿರ್ಲಿಂಗ ವಿಷಯದ ಕುರಿತು ಉಪನ್ಯಾಸ ನೀಡಿ, ಮಾತುಗಳು ಮನುಷ್ಯನ ವ್ಯಕ್ತಿತ್ವದ ಪ್ರತಿಬಿಂಬವಾಗಿದ್ದು, ಎಲ್ಲರನ್ನೂ ಗೆಲ್ಲುವ ಮಾತಿನ ಅಂತಃಶಕ್ತಿ ಅರಿತು ನಡೆದರೆ ಬದುಕು ಹಸನಾಗುತ್ತದೆ ಎಂದರು. ತಾಲೂಕಾ ಕದಳಿ ಮಹಿಳಾ ವೇದಿಕೆ ಅಧ್ಯಕ್ಷೆ ನಿರ್ಮಲಾ ಅರಳಿ ಪ್ರಾಸ್ತಾವಿಕ ಮಾತನಾಡಿ, ಕಳೆದ 20 ವರ್ಷಗಳಿಂದ ಪಟ್ಟಣದ ಅಕ್ಕಮಹಾದೇವಿ ದೇವಸ್ಥಾನದಲ್ಲಿ ದಿ. ಪ್ರೇಮಕ್ಕ ಬಿಂಕದಕಟ್ಟಿ ಅವರ ನೇತೃತ್ವದಲ್ಲಿ ಶ್ರಾವಣ ಮಾಸದ ಕಾರ್ಯಕ್ರಮ ಮಾಡುತ್ತಾ ಬರಲಾಗಿದೆ. ಈ ವರ್ಷವೂ ಧರ್ಮದ ವಿಚಾರ, ಚಿಂತನ–ಮಂಥನ, ಶರಣರ ಕುರಿತ ಉಪನ್ಯಾಸಗಳು, ಸಾಹಿತ್ಯ, ವಚನಗಳ ಮಹತ್ವ, ಸ್ವಾತಂತ್ರ ಹೋರಾಟಗಾರರ ಕುರಿತು ವಿವಿಧ ಉಪನ್ಯಾಸರಿಂದ ಕಾರ್ಯಕ್ರಮ ನಡೆಸುತ್ತಿದೆ ಎಂದರು. ಈ ವೇಳೆ ಪುರಸಭೆ ಅಧ್ಯಕ್ಷೆ ಯಲ್ಲಮ್ಮ ದುರಗಣ್ಣವರ, ಲಲಿತಾ ಕೆರಿಮನಿ, ಸುಭಾಸ ಓದುನವರ, ಎಸ್.ಬಿ. ಕೊಣ್ಣೂರ, ಪಿ.ಬಿ. ಖರಾಟೆ, ಎಂ.ಎನ್. ಗೊರವರ, ತಾಲೂಕು ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಎಲ್.ಎಸ್. ಅರಳಹಳ್ಳಿ, ನಂದಿನಿ ಮಾಳವಾಡ ಮುಂತಾದವರಿದ್ದರು. ಕೆಯುಡಬ್ಲೂಜೆ ಪ್ರಶಸ್ತಿ ಪುರಸ್ಕೃತ ಪತ್ರಕರ್ತ ದಿಗಂಬರ ಪೂಜಾರ, ತನುಶ್ರೀ ಬದಿ, ಕೃಷ್ಣಪ್ರಿಯಾ ಬದಿ ಅವರನ್ನು ಸನ್ಮಾನಿಸಲಾಯಿತು. ರತ್ನಾ ಕರ್ಕಿ ನಿರೂಪಿಸಿದರು.

## ಸಾವರ್ಕರ್ ಮಾನನಷ್ಟ ಮೊಕದ್ದಮೆ ಪ್ರಕರಣ: ರಾಹುಲ್ ಗಾಂಧಿಗೆ ನೀಡಿದ್ದ ಸಮನ್ಸ್‌ಗೆ ಸುಪ್ರೀಂ ಕೋರ್ಟ್ ತಡೆಯಾಜ್ಞೆ



■ ವಿಜಯಸಾಕ್ಷಿ ಸುದ್ದಿ, ನವದೆಹಲಿ

ವಿನಾಯಕ ದಾಮೋದರ್ ಸಾವರ್ಕರ್ ಅವರ ಬಗ್ಗೆ ಅವಹೇಳನಕಾರಿ ಹೇಳಿಕೆಗಳಿಗೆ ಸಂಬಂಧಿಸಿದಂತೆ ಕ್ರಿಮಿನಲ್ ಮಾನನಷ್ಟ ಮೊಕದ್ದಮೆಯಲ್ಲಿ ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರಿಗೆ ನೀಡಲಾದ ಸಮನ್ಸ್‌ಗೆ ಸುಪ್ರೀಂ ಕೋರ್ಟ್ ಶುಕ್ರವಾರ ತಡೆಯಾಜ್ಞೆ ನೀಡಿದೆ.

2022 ರ ನವೆಂಬರ್‌ನಲ್ಲಿ, ಭಾರತ್ ಜೋಡೋ ಯಾತ್ರೆಯ ಸಮಯದಲ್ಲಿ, ಮಹಾರಾಷ್ಟ್ರದ ಅಕೋಲಾದಲ್ಲಿ ನಡೆದ ರ್‍ಯಾಲಿಯಲ್ಲಿ ರಾಹುಲ್ ಗಾಂಧಿ ಮಾಡಿದ ಭಾಷಣಕ್ಕೆ ಸಾವರ್ಕರ್ ಕುಟುಂಬದವರು ಮಾನನಷ್ಟ ಮೊಕದ್ದಮೆ ಹೂಡಿದರು.

ಈ ವಿಷಯದಲ್ಲಿ ವಿಚಾರಣೆ ಮುಂದೂಡಿಕೆ ಕೋರಿ ಪತ್ರ ಸಲ್ಲಿಸಿದ ನಂತರ ನ್ಯಾಯಮೂರ್ತಿಗಳಾದ ದೀಪಂಕರ್ ದತ್ತ ಮತ್ತು ಎಜಿ ಮಸಿಹ್ ಅವರ ಪೀಠವು ನಿಗದಿತ ವಿಚಾರಣೆಯನ್ನು ನಾಲ್ಕು ವಾರಗಳ ಕಾಲ ಮುಂದೂಡಿದೆ. ಈ ಮಧ್ಯೆ, ಏಪ್ರಿಲ್ 25 ರಂದು ರಾಹುಲ್ ಗಾಂಧಿಗೆ ಮೂಲತಃ ನೀಡಲಾದ ಮಧ್ಯಂತರ ಪರಿಹಾರವನ್ನು ವಿಸ್ತರಿಸಲು ನ್ಯಾಯಮೂರ್ತಿ ದತ್ತ ನೇತೃತ್ವದ ಪೀಠ ಆದೇಶಿಸಿದೆ.

ಇದಲ್ಲದೆ, ದೂರುದಾರರಾದ ವಕೀಲ ನೃಪೇಂದ್ರ ಪಾಂಡೆ ಅವರನ್ನು ಎರಡು ವಾರಗಳಲ್ಲಿ ತಮ್ಮ ಉತ್ತರವನ್ನು ಸಲ್ಲಿಸುವಂತೆ ಕೇಳಿದೆ. ನಂತರ, ಎರಡು ವಾರಗಳಲ್ಲಿ ಮರುಸಂಪರ್ಕ ಅಫಿಡವಿಟ್ ಸಲ್ಲಿಸಲು ರಾಹುಲ್ ಗಾಂಧಿಗೆ ಸ್ವಾತಂತ್ರ್ಯ ನೀಡಿದೆ. ಹಿಂದಿನ ವಿಚಾರಣೆಯಲ್ಲಿ, ಸುಪ್ರೀಂ ಕೋರ್ಟ್ ರಾಹುಲ್ ಗಾಂಧಿಯವರಿಗೆ ಬೇಜವಾಬ್ದಾರಿಯುತ ಹೇಳಿಕೆಗಳನ್ನು ನೀಡದಂತೆ ಎಚ್ಚರಿಕೆ ನೀಡಿತ್ತು. ನಿರ್ದಿಷ್ಟವಾಗಿ ಸ್ವಾತಂತ್ರ್ಯ ಹೋರಾಟಗಾರರ ವಿರುದ್ಧ ಏನನ್ನೂ ಮಾತನಾಡಬಾರದು ಎಂದು ಕೇಳಿತ್ತು. ಕಾಂಗ್ರೆಸ್ ನಾಯಕರು ಭವಿಷ್ಯದಲ್ಲಿ ಅಂತಹ ಯಾವುದೇ ಹೇಳಿಕೆಗಳನ್ನು ನೀಡಿದರೆ, ಅವರ ವಿರುದ್ಧ 'ಸ್ವಯಂ ಪ್ರೇರಿತ' ಕ್ರಮ ಕೈಗೊಳ್ಳುವುದಾಗಿ ಸುಪ್ರೀಂ ಕೋರ್ಟ್ ಎಚ್ಚರಿಸಿತ್ತು.

## ಬಿಹಾರ ಮತದಾರರ ಪಟ್ಟಿ ಪರಿಷ್ಕರಣೆ ವಿರುದ್ಧ ಪ್ರತಿಭಟನೆ

■ ವಿಜಯಸಾಕ್ಷಿ ಸುದ್ದಿ, ಬಿಹಾರ

ಶುಕ್ರವಾರದ ರಾಜ್ಯಸಭೆಯ ಕಲಾಪಗಳು ತೀವ್ರ ರಾಜಕೀಯ ಘರ್ಷಣೆಯೊಂದಿಗೆ ಪ್ರಾರಂಭವಾದವು, ಉಪ ಸಭಾಪತಿ ಹರಿವಂಶ್ ಸಿಂಗ್ ಅವರು ಮಧ್ಯಾಹ್ನದವರೆಗೆ ಅವಧಿಗೂ ಮುಂಚಿತವಾಗಿಯೇ ಕಲಾಪವನ್ನು ಮುಂದೂಡಿದರು.

ಬಿಹಾರದ ಮತದಾರರ ಪಟ್ಟಿಗಳ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್), ಮಣಿಪುರದಲ್ಲಿನ ಸಾಂವಿಧಾನಿಕ ಬಿಕ್ಕಟ್ಟು, ಭಾರತ-ಯುಕೆ ವ್ಯಾಪಾರ ಮಾತುಕತೆಗಳ ಪ್ರಭಾವದ ಸುತ್ತಲಿನ ಪ್ರಶ್ನೆಗಳು ಮತ್ತು ಇತರ ವಿಷಯಗಳ ಕುರಿತು ನಿಯಮ 267 ರ ಅಡಿಯಲ್ಲಿ ಚರ್ಚೆಗೆ ವಿರೋಧ ಪಕ್ಷಗಳು ಬೇಡಿಕೆ ಇಟ್ಟವು.

ಸೂಚನೆಗಳ ಹೊರತಾಗಿಯೂ, ಅಧ್ಯಕ್ಷರು ನಿಯಮಿತ ಕಲಾಪವನ್ನು ಸ್ಥಗಿತಗೊಳಿಸಲು ನಿರಾಕರಿಸಿದರು. ಡಿಸೆಂಬರ್ 8 ಮತ್ತು 19, 2022 ರಂದು ನೀಡಲಾದ ನಿಯಮ 267 ರ ಮೇಲಿನ ಹಿಂದಿನ ನಿರ್ದೇಶನಗಳನ್ನು ಪುನರುಚ್ಚರಿಸಿದರು, ಇದನ್ನು ಹಲವು ಬಾರಿ ಪುನರುಚ್ಚರಿಸಲಾಗಿದೆ. ಅಖಿಲೇಶ್ ಪ್ರತಾಪ್ ಸಿಂಗ್, ರಜನಿ ಪಾಟೀಲ್, ಎ. ರಹೀಮ್, ಸಾಕೇತ್ ಗೋಖಲೆ, ಮಹುವಾ ಮಾಜ್ಹಿ, ಸುಶ್ಮಿತಾ ಡಿಯೋ ಮತ್ತು ರೇಣುಕಾ ಚೌಧರಿ ಸೇರಿದಂತೆ ಶಾಸಕರು ಸಲ್ಲಿಸಿದ ನೋಟಿಸ್‌ಗಳನ್ನು ಈ ಕಾರ್ಯವಿಧಾನದ ನಿರ್ದೇಶನಗಳನ್ನು ಪಾಲಿಸದ ಕಾರಣ ತಿರಸ್ಕರಿಸಲಾಗಿದೆ ಎಂದು ಉಪ ಸ್ಪೀಕರ್ ಘೋಷಿಸಿದರು.

## ವಿದ್ಯಾರ್ಥಿಗಳ ಗಮನಕ್ಕೆ

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ 2026ನೇ ಸಾಲಿನ ಜವಾಹರ ನವೋದಯ ವಿದ್ಯಾಲಯ 6ನೇ ತರಗತಿಗಾಗಿ ಪ್ರವೇಶ ಪರೀಕ್ಷೆಯು ದಿನಾಂಕ 13.12.2025 ಶನಿವಾರದಂದು ಜಿಲ್ಲೆಯ ಆಯಾ ತಾಲೂಕು ಕೇಂದ್ರಗಳಲ್ಲಿ ನಡೆಯಲಿದೆ. ಅರ್ಜಿಗಳನ್ನು 29-07-2025. ರ ಒಳಗಾಗಿ ಆನ್ ಲೈನ್ ನಲ್ಲಿ (www.navodayanav.gov.in) ಸಲ್ಲಿಸಬೇಕಾಗಿರುತ್ತದೆ.

ವಿದ್ಯಾರ್ಥಿ ಮತ್ತು ಪೋಷಕರು ಗದಗ ಜಿಲ್ಲೆಯ ನಿವಾಸಿಗಳು ಆಗಿರಬೇಕು , ವಿದ್ಯಾರ್ಥಿಯು 2025-26ನೇ ಸಾಲಿನಲ್ಲಿ 5ನೇ ತರಗತಿಯಲ್ಲಿ ಓದುತ್ತಿರಬೇಕು. ಕೇಂದ್ರ ಸರ್ಕಾರದ ಮೀಸಲಾತಿಯ ನಿಯಮದಂತೆ ಪ್ರವೇಶ ನೀಡಲಾಗುವದು.

ಅರ್ಜಿ ಸಲ್ಲಿಸಿದ ಪ್ರತಿಯನ್ನು ಪಾಲಕರು ತೆಗೆದಿಟ್ಟು ತಮ್ಮ ಮಗು ಆಯ್ಕೆಯಾದಲ್ಲಿ ಅದೇ ಪ್ರತಿಯನ್ನು ದಾಖಲಾತಿ ಸಮಯದಲ್ಲಿ ಹಾಜರು ಪಡಿಸತಕ್ಕದ್ದು. ಹೆಚ್ಚಿನ ಮಾಹಿತಿಗಾಗಿ ಪ್ರಾಚಾರ್ಯರು, ಜನವಿ ಗದಗ ಜಿಲ್ಲೆ ಅಥವಾ www.navodaya.gov.in ಗೆ ಭೇಟಿ ಕೊಡಬಹುದು ಎಂದು ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಭಾರತ ಸರ್ಕಾರದ ಸಹಭಾಗಿತ್ವದಲ್ಲಿ ಕೃಷಿ; ಒಂದು ಚಿಂತನೆ

# ಕೃಷಿ ಪ್ರಾಧಾನ್ಯತೆಯ ವಿಮರ್ಶೆಯಾಗಲಿ



ಕಳೆದ 12 ವರ್ಷಗಳಲ್ಲಿ ದೇಶಾದ್ಯಂತ ಲೆಕ್ಕವಿಲ್ಲದಷ್ಟು ರಸ್ತೆ ಹಾಗೂ ರೈಲ್ವೆ ಕಾಮಗಾರಿಗಳು ನಡೆದದ್ದು ನಮ್ಮೆಲ್ಲರ ಕಣ್ಣು ಮುಂದೆ ಇದೆ. ಇವುಗಳು ದೇಶವೆಂಬ ದೇಹದ ನರನಾಡಿಗಳಾದರೆ, ಕೃಷಿ ಉತ್ಪನ್ನ ಎಂಬುದು ಈ ನರನಾಡಿಗಳಿಗೆ ಶಕ್ತಿ ತುಂಬುವ ಚೇತನದಂತೆ. ಕೃಷಿ ಚಟುವಟಿಕೆಯಲ್ಲಿ ತೊಡಗಿಕೊಂಡಿರುವ ರೈತ ದೇಶದ ಬೆನ್ನೆಲುಬಿನಂತೆ. ಬೆನ್ನೆಲಬು ಗಟ್ಟಿಯಾಗಿದ್ದರೆ ಮಾತ್ರ ದೇಶ ಗಟ್ಟಿಯಾಗಿರಲು ಸಾಧ್ಯ.

ಭಾರತ ಸರ್ಕಾರದ ಸಹಭಾಗಿತ್ವದಲ್ಲಿ ರೈತರೊಂದಿಗೆ ಕೃಷಿ ಚಟುವಟಿಕೆಗಳು ನಡದರೆ ಹೇಗೆ ಎಂಬುದೊಂದು ಚಿಂತನೆ. ಕೃಷಿ ಪ್ರಧಾನ ದೇಶವಾದ ಭಾರತದಲ್ಲಿ ನಾವು ಕೃಷಿಗೆ ಅದೆಷ್ಟು ಪ್ರಾಧಾನ್ಯತೆ ಕೊಟ್ಟಿದ್ದೇವೆ ಎಂಬುದನ್ನು ಆತ್ಮವಿಮರ್ಶೆ ಮಾಡಿಕೊಳ್ಳಬೇಕಿದೆ. ಹೇರಳವಾದ ಫಲವತ್ತಾದ ಭೂಮಿ, ತುಂಬಿ ಹರಿಯುವ ಹೊಳೆ-ಹಳ್ಳಗಳಂಥ ಸಂಪನ್ಮೂಲಗಳಿದ್ದರೂ ಅವುಗಳ ಸದ್ಬಳಕೆ ಆಗುತ್ತಿಲ್ಲ ಎನ್ನುವುದು ನೋವಿನ ಸಂಗತಿ.

ಹೆಚ್ಚುತ್ತಿರುವ ಔದ್ಯೋಗಿಕರಣ ಹಾಗೂ ಪರಿಸರ ನಾಶದಿಂದಾಗಿ ಜಾಗತಿಕ ತಾಪಮಾನ ಹೆಚ್ಚಿ ಮಳೆ ಸಮಯಕ್ಕೆ ಸರಿಯಾಗಿ ಆಗುತ್ತಿಲ್ಲ ಎಂದು ಹಲವಾರು ತಜ್ಞರ ಅಭಿಪ್ರಾಯ. ಹಾಗಾದರೆ ಈ ಸಮಸ್ಯೆಗೆ ಪರಿಹಾರವೇ ಇಲ್ಲವೇ, ಖಂಡಿತ ಇದೆ. ಪರಿಸರ ನಾಶವನ್ನು ತಡೆಗಟ್ಟುವುದು, ಹೊಳೆ-ಹಳ್ಳಗಳ ನೀರನ್ನು ಸಮರ್ಪಕವಾಗಿ ಬಳಸುವುದು. ಈ ಎರಡೂ ದಡಗಳನ್ನು ಸೇರಿಸುವ ನಿಟ್ಟಿನಲ್ಲಿ ಭಾರತ ಸರ್ಕಾರ ರೈತರ ಸಹಭಾಗೀತ್ವದಲ್ಲಿ ಉಳುಮೆ ಮಾಡುವ ನೇತೃತ್ವ ವಹಿಸಬೇಕು. ಉತ್ಸಾಹಿ ರೈತರನ್ನು ಬಳಸಿಕೊಂಡು ಸೂಕ್ತ ಸಂಭಾವನೆಯನ್ನೂ ನೀಡಬೇಕು.

ಪರಂಪರಾಗತವಾಗಿ ಬಂದ ಕೃಷಿ ಪದ್ಧತಿ ರೈತರಿಗೆ ಮಾರಕವಾಗಿ ಪರಿಣಮಿಸಿದೆ. ಆಧುನಿಕ ಪದ್ಧತಿಯನ್ನು ಅಳವಡಿಸಿಕೊಳ್ಳಲು ಸಣ್ಣ ಹಿಡುವಳಿದಾರರಿಗೆ ಸಾಧ್ಯವಾಗುತ್ತಿಲ್ಲ. ಕಾರಣ, ಅದಕ್ಕೆ ತಗಲಬಹುದಾದ ವೆಚ್ಚ. ಭಾರತ ಸರ್ಕಾರದ ಸಹಭಾಗಿತ್ವದಲ್ಲಿ ಕೃಷಿ ಚಟುವಟಿಕೆಗಳು ನಡೆದದ್ದೇ ಆದರೆ ಈ ಸಮಸ್ಯೆಗೆ ಪರಿಹಾರ ಸಾಧ್ಯ.

ಶಿಕ್ಷಣದ ಮಹತ್ವ ಅರಿತ ರೈತ ತನ್ನ ಮಕ್ಕಳಿಗೆ ಒಳ್ಳೆ ವಿದ್ಯಾಭ್ಯಾಸ ಕೊಡಿಸುತ್ತಾನೆ. ವಿದ್ಯಾವಂತರಾದ ಮಕ್ಕಳು ನೌಕರಿಗಾಗಿ ಮಹಾನಗರಗಳಿಗೆ ವಲಸೆ ಹೋಗುವುದು ಅನಿವಾರ್ಯ. ಹಳ್ಳಿಯಲ್ಲಿ ಉಳಿದ ಯುವಕರು ಬಿಟ್ಟಿ ಭಾಗ್ಯಗಳಂಥ ಸರಕಾರದ ಗ್ಯಾರಂಟಿ ಯೋಜನೆಗಳಿಂದಾಗಿ ದುಡಿದು ತಿನ್ನಬೇಕೆನ್ನುವ ಅವಶ್ಯಕತೆಯೇ ಇಲ್ಲದಂತಾಗಿದೆ. ವಾರದಲ್ಲಿ 2-3 ದಿನ ದುಡಿದರೆ ಸಾಕು ಉಪಜೀವನ ಸಾಗಿಸಬಹುದು. ಎಂಬ ಭಾವ ದೂರಾಗಬೇಕು. ವಿದ್ಯಾವಂತ ಯುವಕರು ಹಳ್ಳಿಯಿಂದ ನಗರಗಳಿಗೆ ವಲಸೆ ಹೋಗುವುದನ್ನು ತಡೆಗಟ್ಟಲು ಸರಕಾರ ಸಣ್ಣ ನಗರಗಳಲ್ಲಿ ಉದ್ಯಮಗಳನ್ನು ಸ್ಥಾಪಿಸಬೇಕು.

ಹಗಲು-ರಾತ್ರಿ ಕಷ್ಟಪಟ್ಟು ದುಡಿದ ರೈತನಿಗೆ ತನ್ನ ಬೆಳೆಗೆ ಸರಿಯಾದ ಬೆಲೆ ಸಿಗದೇ ಇದ್ದಾಗ ಸಹಜವಾಗಿ ಕೃಷಿಯಲ್ಲಿ ಉತ್ಸಾಹ ಕಳೆದುಕೊಳ್ಳುತ್ತಾನೆ. ಭಾರತ ಸರಕಾರವೇ ರೈತನೊಂದಿಗೆ ಪಾಲುದಾರನಾದರೆ ಬೆಲೆ ಕುಸಿತದ ಪರಿಣಾಮವನ್ನು ಸಮರ್ಥವಾಗಿ ನಿಭಾಯಿಸಲು ಸಾಧ್ಯ.

ಹತ್ತು ಹಲವು ಸಮಸ್ಯೆಗಳನ್ನು ಎದುರಿಸುತ್ತಿರುವ ರೈತನ ಜೀವನ ಮಟ್ಟ ಕುಸಿದಿರುವುದರಿಂದ ರೈತನಿಗೆ ವಿವಾಹವಾಗಲು ಕನ್ಯೆ ದೊರೆಯುವುದು ಕೂಡ ಕಷ್ಟವಾಗುತ್ತಿದೆ. ಇದರಿಂದಾಗಿ ರೈತನ ಮನೋಬಲ ಕುಗ್ಗಿ ಕೀಳರಿಮೆಗೆ ಒಳಗಾಗಿದ್ದಾನೆ. ಅದರಿಂದ ಹೊರಬರಲು ಸರಕಾರ ಕೃಷಿಯನ್ನು ಒಂದು ಉದ್ಯಮ ಎಂದು ಪರಿಗಣಿಸಬೇಕು. ರೈತನಿಗೆ ಉದ್ಯಮಿಯ ಸ್ಥಾನಮಾನ ದೊರೆಯುವಂತೆ ಮಾಡಬೇಕು. ಸರಕಾರ ಸ್ಮಾರ್ಟ್ ನಗರಗಳನ್ನು (ಟಚಿಡಿಣ ಛಿಣಥಿ) ನಿರ್ಮಿಸುವ ಬದಲು, ಸ್ಮಾರ್ಟ್ ಹಳ್ಳಿಗಳನ್ನು ನಿರ್ಮಿಸಬೇಕು.

ಕೃಷಿಗೆ ಬೇಕಾಗುವ ಬೀಜ, ಗೊಬ್ಬರ, ಕೃಷಿ ಉಪಕಾರಣಗಳು, ಕೃಷಿ ಕಾರ್ಮಿಕರ ವೇತನ ಹೀಗೆ ಪ್ರತಿಯೊಂದು ವಸ್ತು ಹಾಗೂ ಸೇವೆಯ ಬೆಲೆ ದಿನೇ ದಿನೇ ಹೆಚ್ಚುತ್ತಿರುವುದು ಗಮನಾರ್ಹ. ಭಾರತ ಸರಕಾರ ರೈತನೊಂದಿಗೆ ಭಾಗಿದಾರನಾದರೆ ಇವುಗಳಿಗೆ ಸೂಕ್ತ ಕಡಿವಾಣ ಹಾಕಬಹುದು.

ಅವಿಭಕ್ತ ಕುಟುಂಬಗಳ ದೇಶವಾಗಿದ್ದ ಭಾರತಲ್ಲಿ ಅವಿಭಕ್ತ ಕುಟುಂಬಗಳು ಒಡೆದು ಹೋಗುತ್ತಿವೆ. ದೊಡ್ಡ ದೊಡ್ಡ ಜಮೀನುಳ್ಳ ರೈತಾಪಿ ಕುಟುಂಬಗಳು ವಿಭಜನೆಗೊಂಡಾಗ ಜಮೀನನ್ನು ತುಂಡರಿಸಬೇಕಾದ ಅನಿವಾರ್ಯತೆ ಎದುರಾಗುವುದು. ಜಮೀನು ವಿಭಜಿಸಿದಾಗ ಬದುವುಗಳನ್ನು (ವಡ್ಡು) ಹಾಕಬೇಕಾಗುತ್ತದೆ. ಹೀಗಾಗಿ ದೇಶಾದ್ಯಂತ ಬದುವುಗಳ ಪ್ರಮಾಣ ಲೆಕ್ಕ ಹಾಕಿದರೆ ಕೋಟ್ಯಾನುಗಟ್ಟಲೆ ಎಕರೆ ಜಮೀನು ಕೇವಲ ಬದುವುಗಳಲ್ಲೇ ಉಳಿದು ಕೆಲಸಕ್ಕೆ ಬಾರದಂತಾಗಿದೆ. ಅಣ್ಣ ತಮ್ಮಂದಿರ ವ್ಯಾಜ್ಯದಿಂದಾಗಿ ಲೆಕ್ಕವಿಲ್ಲದಷ್ಟು ಕೃಷಿ ಭೂಮಿ ಪಡ ಬಿದ್ದಿದೆ.

ಜಮೀನು ತುಂಡಾಗುವುದರ ಇನ್ನೊಂದು ದುಷ್ಪರಿಣಾಮವೆಂದರೆ, ದೊಡ್ಡ ಜಮೀನಿನ ಹಿಡುವಳಿದಾರರು ಸಣ್ಣ ಹಿಡುವಳಿದಾರರಾಗಿ ಮಾರ್ಪಟ್ಟು ಕೃಷಿ ಉತ್ಪನ್ನದ ಖರ್ಚು ನೀಗಿಸಲು ಸಾಧ್ಯವಾಗುತ್ತಿಲ್ಲ. ಆದ್ದರಿಂದ ಭಾರತ ಸರಕಾರ ಎಲ್ಲ ರೈತರ ಜಮೀನನ್ನು ಒಟ್ಟುಗೂಡಿಸಿ ಸಾವಿರಾರು ಎಕರೆಗಳ ಅಖಂಡ ಭೂಮಿಯನ್ನು ಉಳಿಮೆ ಮಾಡಿದಾಗ ಕೃಷಿ ಉತ್ಪನ್ನದ ಖರ್ಚು ಕಡಿಮೆಗೊಳಿಸಬಹುದು. ಜಮೀನಿಗೆ ತಕ್ಕಂತೆ ವೈಜ್ಞಾನಿಕವಾಗಿ ಮಣ್ಣು ಪರೀಕ್ಷೆ ಮಾಡಿ ಮಿಶ್ರ ಬೆಳೆಗಳನ್ನು ಬೆಳೆದಾಗ ಬೆಲೆ ಕುಸಿತದ ಅಪಾಯದಿಂದಲೂ ಪಾರಾಗಬಹುದು.

ಸರಕಾರದ ಸಹಭಾಗಿತ್ವದಲ್ಲಿ ಕೃಷಿ ನಡೆದರೆ ದೊಡ್ಡ ಪ್ರಮಾಣದಲ್ಲಿ ಬೆಳೆಗಳನ್ನು ಬೆಳೆದು ರಫ್ತು ಮಾಡುವ ಅವಕಾಶಗಳು ಸಹ ಹೇರಳವಾಗಿ ದೊರೆಯುವುದು. ಒಟ್ಟಾರೆ ಹೇಳುವುದಾದರೆ ರೈತನೊಂದಿಗೆ ಸರಕಾರ ಕೈ ಜೋಡಿಸಿದರೆ ನಿರ್ಲಕ್ಷ್ಯಕ್ಕೊಳಗಾದ ಕೃಷಿಯನ್ನು ಮತ್ತೊಮ್ಮೆ ಒಂದು ಬೃಹತ್ ಉದ್ದಿಮೆಯನ್ನಾಗಿ ಮಾಡಲು ಸಾಧ್ಯ. ಇಸ್ರೇಲ್‌ನಂಥ ಪುಟ್ಟ ದೇಶ ಸಮುದ್ರದ ನೀರಿನಿಂದ ಕೃಷಿ ಮಾಡಿ ಬೆಳೆಗಳನ್ನು ಬೆಳೆದು ರಫ್ತು ಮಾಡುವ ಹಂತಕ್ಕೆ ತಲುಪಿದ್ದಾರೆಂದರೆ, ಫಲವತ್ತಾದ ಭೂಮಿ ತುಂಬಿ ಹರಿಯುವ ಹೊಳೆ-ಹಳ್ಳಗಳ ದೇಶವಾದ ಭಾರತದಲ್ಲಿ ಇದನ್ನು ಸಾಧಿಸಲು ಅಸಾಧ್ಯವೇ...?



– ಮಂಜುನಾಥ ಚನ್ನಪ್ಪನವರ.
ಬೆಟಗೇರಿ, ಗದಗ.

## ಸರ್ಕಾರಗಳಿಂದ ಜನವಿರೋಧಿ ನೀತಿ



■ ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ

ದೇಶದ ಸ್ವಾತಂತ್ರ್ಯಕ್ಕಾಗಿ ದುಡಿಯುವ ವರ್ಗವನ್ನು ಸಂಘಟಿಸಿ ಮುನ್ನಡೆಸಿದ ಇತಿಹಾಸ ಭಾರತ ಕಮ್ಯುನಿಸ್ಟ್ ಪಕ್ಷಕ್ಕಿದೆ ಎಂದು ಸಿಪಿಐ ಜಿಲ್ಲಾ ಸಹಕಾರ್ಯದರ್ಶಿ ರೇಣುಕಮ್ಮ ಹೇಳಿದರು.

ತಾಲೂಕಿನ ಬೆಣ್ಣಿಹಳ್ಳಿಯಲ್ಲಿ ಗುರುವಾರ ನಡೆದ ಭಾರತ ಕಮ್ಯುನಿಸ್ಟ್ ಪಕ್ಷದ 8ನೇ ತಾಲೂಕು ಸಮ್ಮೇಳನವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಸ್ವಾತಂತ್ರ್ಯದ ನಂತರ ದುಡಿಯುವ ವರ್ಗದ ನ್ಯಾಯಸಮ್ಮತ ಹಕ್ಕುಗಳಿಗಾಗಿ ಕಮ್ಯುನಿಸ್ಟ್ ಪಕ್ಷ ನಿರಂತರವಾಗಿ ಹೋರಾಟ ನಡೆಸುತ್ತಿದೆ. ಆದರೆ ಇಂದಿನ ಸರ್ಕಾರಗಳು ಜನವಿರೋಧಿ ನೀತಿ ಅನುಸರಿಸುತ್ತಿವೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಸಿಪಿಐ ತಾಲೂಕು ಕಾರ್ಯದರ್ಶಿ ಎಚ್.ಎಂ. ಸಂತೋಷ್, ಪ್ರಸ್ತುತ ನವ ವಸಾಹತುಶಾಹಿಯ ಜಾಗತೀಕರಣ ನೀತಿಗಳ ವಿರುದ್ಧ ಭಾರತ ಕಮ್ಯೂನಿಸ್ಟ್ ಪಕ್ಷ ನಿರಂತರವಾಗಿ ಹೋರಾಡುತ್ತಿದೆ. ಶ್ರಮಿಕ ವರ್ಗದಲ್ಲಿ ರಾಜಕೀಯ ಪ್ರಜ್ಞೆ ಬೆಳೆಸಿಕೊಂಡಾಗ ತಮ್ಮ ಶೋಷಣೆಯಿಂದ ಮುಕ್ತರಾಗುತ್ತಾರೆ. ಪಕ್ಷ ಹಾಗೂ ಪಕ್ಷದ ಸಾಮೂಹಿಕ ಸಂಘಟನೆಗಳು ಜನರ ಪರವಾಗಿ ಹೋರಾಟ ಮಾಡುವ ಆಗತ್ಯವಿದೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಹೊಸಳ್ಳಿ ಮಲ್ಲೇಶ್ ಮಾತನಾಡಿ, ಹರಪನಹಳ್ಳಿ ತಾಲೂಕಿನಲ್ಲಿ ಅನೇಕ ಹೋರಾಟಗಳನ್ನು ಮಾಡಿದ್ದೇವೆ. ಕಮ್ಯುನಿಸ್ಟ್ ನಾಯಕರಿಗೆ ಒಳನೋಟ ಮತ್ತು ಮುನ್ನೋಟಗಳ ಬಗ್ಗೆ ಅರಿವಿರುವ ಕಾರಣ ಶ್ರಮಿಕರ ಧ್ವನಿಯಾಗಿದ್ದೇವೆ ಎಂದು ತಿಳಿಸಿದರು.

ಇದೇ ವೇಳೆ ತಾಲೂಕು ಮಂಡಳಿ ಸದಸ್ಯನರನ್ನು ಆಯ್ಕೆ ಮಾಡಲಾಯಿತು. ಕಾರ್ಯದರ್ಶಿಯಾಗಿ ರಮೇಶ್ ನಾಯ್ಕ ಹಾಗೂ ಸಹ ಕಾರ್ಯದರ್ಶಿಯಾಗಿ ಬಳಿಗನೂರು ಕೊಟ್ರೇಶ್ ಮತ್ತು ಹಾವೇರಿ ದೊಡ್ಡಬಸಪ್ಪ, ಖಜಾಂಚಿಯಾಗಿ ಪುಷ್ಪ ಅವರನ್ನು ಆಯ್ಕೆ ಮಾಡಲಾಯಿತು.

ಈ ಸಂದರ್ಭದಲ್ಲಿ ಮುಖಂಡರಾದ ಗುಡಿಹಳ್ಳಿ ಹಾಲೇಶ್, ಹನುಮಂತಪ್ಪ, ರಮೇಶ್‌ನಾಯ್ಕ, ಬಳಿಗನೂರು ಕೊಟ್ರೇಶ್, ಪುಷ್ಪ, ದೊಡ್ಡಬಸವರಾಜ್ ಉಪಸ್ಥಿತರಿದ್ದರು.

## 'ಶಿಲ್ಪಾ ಶ್ರೀನಿವಾಸ್' ಚಿತ್ರೀಕರಣ ಆರಂಭ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಸ್ನೇಹಾಲಯಂ ಕ್ರಿಯೇಶನ್ಸ್ ಅರ್ಪಿಸುವ ಹಾರರ್, ಸಸ್ಪೆನ್ಸ್, ಥ್ರಿಲ್ಲರ್ 'ಶಿಲ್ಪಾ ಶ್ರೀನಿವಾಸ್' ಕನ್ನಡ ಚಲನಚಿತ್ರದ ಚಿತ್ರೀಕರಣ ಹೊಸಕೋಟೆಯ ಗಟ್ಟಿಗನಬ್ಬೆ ಸುತ್ತಮುತ್ತ ಭರದಿಂದ ಸಾಗಿದೆ.

ಖ್ಯಾತ ನಿರ್ಮಾಪಕರು, ಪ್ರಸ್ತುತ ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿಯ ಉಪಾಧ್ಯಕ್ಷರೂ ಆದ ಶಿಲ್ಪಾ ಶ್ರೀನಿವಾಸ್ ಅವರದೇ ಹೆಸರಿನ ಈ ಚಿತ್ರದಲ್ಲಿ ವಿಶೇಷ ಪಾತ್ರದಲ್ಲಿ ಅಭಿನಯಿಸುತ್ತಿದ್ದು, ನಟ ಹಾಗೂ ಸಂಕಲನಕಾರ ನಾಗೇಂದ್ರ ಅರಸ್ ಕ್ಲಾಪ್ ಮಾಡಿ ಚಿತ್ರೀಕರಣಕ್ಕೆ ಚಾಲನೆ ನೀಡದರು.

ಹೊಸಕೋಟೆ, ಚಿಕ್ಕಬಳ್ಳಾಪುರ, ಗಾಂಧಿನಗರದಲ್ಲಿ ಒಟ್ಟು ಎರಡು ಹಂತಗಳಲ್ಲಿ ಚಿತ್ರೀಕರಣ ನಡೆಯಲಿದೆ ಎಂದು ನಿರ್ದೇಶಕ ಆರ್.ಕೆ. ಗಾಂಧಿ ಹೇಳಿದ್ದಾರೆ. ಕಿಶೋರ್ ಕಾಸರಗೋಡು, ಸ್ವಾತಿ ಲಿಂಗರಾಜ್ ಪ್ರಮುಖ ಪಾತ್ರದಲ್ಲಿದ್ದಾರೆ. ಪ್ರಿಯಾಂಕ, ಶೋಭರಾಜ್, ನಾಗೇಂದ್ರ ಅರಸ್, ಕಿರಣಕುಮಾರ್ ಗಟ್ಟಿಗನಬ್ಬೆ, ಸಿ.ಟಿ. ಜಯರಾಮ್, ಹೊಸಕೋಟೆ ಶಿವಕುಮಾರ್, ಲೋಕೇಶ್, ಬೆಂಗಳೂರು ಮನು, ಮಾಸ್ಟರ್ ಮನ್ವಿತ್, ಮಾಸ್ಟರ್ ಅಭ್ಯಂತ್, ಭಕ್ತರಹಳ್ಳಿ ರವಿ ಮೊದಲಾದವರಿದ್ದಾರೆ.

ಈಗಾಗಲೇ ಪೋಸ್ಟ್ ಪ್ರೊಡಕ್ಷನ್ ಹಂತದಲ್ಲಿರುವ ಮುಗಿಲ ಮಲ್ಲಿಗೆ, ಲಿಲ್ಲಿ ಸಿನಿಮಾದ ಯುವ ನಿರ್ದೇಶಕ ಆರ್.ಕೆ. ಗಾಂಧಿ ಕಥೆ, ಚಿತ್ರಕಥೆ, ಸಂಭಾಷಣೆ ಬರೆದು ನಿರ್ದೇಶನ ಮಾಡುತ್ತಿದ್ದಾರೆ. ಪ್ರಮೋದ್ ಭಾರತೀಯ ಛಾಯಾಗ್ರಹಣ, ಅನಿರುದ್ಧ ಶಾಸ್ತ್ರಿ ಸಂಗೀತ, ಪ್ರತಾಪ್ ಭಟ್ ಸಾಹಿತ್ಯ, ಥ್ರಿಲ್ಲರ್ ಮಂಜು ಸಾಹಸ, ವಿನಯ್ ಜಿ.ಆಲೂರ ಸಂಕಲನ, ಮೋಹನ್ ಕುಮಾರ್ ಪ್ರಸಾಧನ, ಇಂದ್ರಕುಮಾರ್ ಸ್ಥಿರಚಿತ್ರ, ಮಲ್ಲಿಕಾರ್ಜುನ್ ಕಲಾ ನಿರ್ದೇಶನ, ಎಂ.ಜಿ. ಕಲ್ಲೇಶ್, ಡಾ. ಪ್ರಭು ಗಂಜಿಹಾಳ, ಡಾ. ವೀರೇಶ ಹಂಡಿಗಿ ಪಿ.ಆರ್.ಓ ಆಗಿದ್ದಾರೆ.



### ಪ.ಪಂ ಹಿಂದಿನ ಕಟ್ಟಡ ಎಸ್‌ಬಿಐ ಬ್ಯಾಂಕಿಗೆ ಬಾಡಿಗೆ ನೀಡಲು ನಿರ್ಧಾರ

# 39 ಸಾವಿರ ರೂ.ಗಳ ಬಾಡಿಗೆ ನಿಗದಿ



ಸದಸ್ಯೆ ಜ್ಯೋತಿ ಪಾಯಪ್ಪಗೌಡ್ರ ಮಾತನಾಡಿ, ಅಮೃತ್-2 ಯೋಜನೆ ಕಾರ್ಯ ನಡೆದಿದ್ದು, 9ನೇ ವಾರ್ಡ್‌ನಲ್ಲಿ ಪೈಪ್‌ಲೈನ್ ಅಳವಡಿಸುವಾಗ ಕೆಲವು ಕಡೆ ಒಳ ಚರಂಡಿ ಪೈಪ್‌ಲೈನ್ ಹಾಗೂ ನೀರಿನ ಪೈಪ್‌ಲೈನ್ ಒಡೆದಿದ್ದಾರೆ. ಸಾರ್ವಜನಿಕರಿಗೆ ತೊಂದರೆ ಆಗುತ್ತಿದೆ ಎಂದು ಕರೆ ಮಾಡಿದರೆ ಯಾರೂ ಕರೆ ಸ್ವೀಕರಿಸುತ್ತಿಲ್ಲ ಎಂದು ಹೊಸಮನಿಯವರಿಗೆ ಕೇಳಿದಾಗ, ಹಳೆಯ ಪೈಪ್ ಒಡೆದರೆ ಗುತ್ತಿಗೆದಾರರೇ ಹಾಕಿಕೊಡಬೇಕು ಎಂದರು.

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಪಟ್ಟಣ ಪಂಚಾಯಿತಿಯ ಹಿಂಭಾಗದಲ್ಲಿ ನೂತನವಾಗಿ ನಿರ್ಮಿಸಿರುವ ಕಟ್ಟಡವನ್ನು ನರೇಗಲ್ಲದಲ್ಲಿ ಶೀಘ್ರವೇ ಪ್ರಾರಂಭವಾಗಲಿರುವ ಭಾರತೀಯ ಸ್ಟೇಟ್ ಬ್ಯಾಂಕಿಗೆ ಬಾಡಿಗೆ ಆಧಾರದ ಮೇಲೆ ನೀಡಲು ಪ.ಪಂ ವಿಶೇಷ ಸಾಮಾನ್ಯ ಸಭೆಯಲ್ಲಿ ನಿರ್ಧರಿಸಲಾಯಿತು.

ಪ.ಪಂ ಅಧ್ಯಕ್ಷ ಫಕೀರಪ್ಪ ಮಳ್ಳಿಯವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಪಾಲ್ಗೊಂಡ ಸದಸ್ಯರೆಲ್ಲರೂ ಈ ವಿಷಯವನ್ನು ಒಕ್ಕೊರಲಿನಿಂದ ಅನುಮೋದಿಸಿದರು. ಸದಸ್ಯ ಶ್ರೀಶೈಲಪ್ಪ ಬಂಡಿಹಾಳರ ಪ್ರಶ್ನೆಗೆ ಉತ್ತರಿಸಿದ ಮುಖ್ಯಾಧಿಕಾರಿ ನಿಡಶೇಶಿ ಮಾಹಿತಿ ನೀಡಿ, ಬ್ಯಾಂಕಿನ ಅಧಿಕಾರಿಗಳು ಕಟ್ಟಡವನ್ನು ಒಪ್ಪಿಕೊಂಡು ಹೋಗಿದ್ದಾರೆ. ಅದರಲ್ಲಿ ಕೆಲವಷ್ಟು ಅನುಕೂಲತೆಗಳನ್ನು ಮಾಡಿಕೊಡಲು ತಿಳಿಸಿದ್ದಾರೆ. ಇನ್ನು ಹದಿನೈದು ದಿನಗಳಲ್ಲಿ ನಿರ್ಮಾಣವಾಗುತ್ತಿರುವ ಕಟ್ಟಡ ಪೂರ್ಣಗೊಳ್ಳುವುದು. ಅದಕ್ಕೆ 39 ಸಾವಿರ ರೂ.ಗಳ ತಿಂಗಳ ಬಾಡಿಗೆ ನಿಗದಿಪಡಿಸಲಾಗಿದೆ ಎಂದರು.

ಉಪಾಧ್ಯಕ್ಷ ಕುಮಾರಸ್ವಾಮಿ ಕೋರಧಾನ್ಯಮಠ ಮಾತನಾಡಿ, ನಿರ್ಮಾಣಗೊಳ್ಳುವ ಈ ಕಟ್ಟಡವನ್ನು ಬಾಡಿಗೆ ನೀಡುವುದರಿಂದ ಪ.ಪಂಗೆ ಆದಾಯ ಬರುತ್ತದೆ. ಅವರಿಗೆ ಕಟ್ಟಡವನ್ನು ಹಸ್ತಾಂತರ ಮಾಡುವ ಮುಂಚೆ ಭದ್ರತಾ ಠೇವಣಿ ಮತ್ತು ಎಷ್ಟು ವರ್ಷಗಳ ಕಾಲ ಭೋಗ್ಯಕ್ಕೆ ಕೊಡಬೇಕು ಎಂಬುದರ ಬಗ್ಗೆ ಎಲ್ಲರೂ ಸೇರಿ ನಿರ್ಧರಿಸೋಣ ಎಂದರು.

ಸದಸ್ಯ ರಾಚಯ್ಯ ಮಾಲಗಿತ್ತಿಮಠ ಮಾತನಾಡಿ, ಕಟ್ಟಡವನ್ನು 12 ವರ್ಷಗಳ ಭೋಗ್ಯಕ್ಕೆ ಕೊಡಿ. ಪ್ರತಿ ಮೂರು ವರ್ಷಗಳಿಗೊಮ್ಮೆ ಬಾಡಿಗೆಯನ್ನು ಹೆಚ್ಚಿಸಿ ಎಂದು ಸೂಚಿಸಿದರು. 15ನೇ ಹಣಕಾಸು ಹಾಗೂ ಎಸ್.ಎಫ್.ಸಿ ಯೋಜನೆಯಡಿಯಲ್ಲಿನ ಆಡಳಿತಾತ್ಮಕ ಮಂಜೂರಿಗೆ ಸಭೆ ಒಪ್ಪಿಗೆ ನೀಡಿತು.

ಕಾರ್ಯಪಾಲಕ ಅಭಿಯಂತರ ಜಗದೀಶ ಹೊಸಮನಿ ಮಾತನಾಡಿ, ಅಮೃತ-2 ಯೋಜನೆ ಈಗಾಗಲೇ ಪ್ರಾರಂಭವಾಗಿದ್ದು, 57 ಕಿ.ಮಿ ಪೈಪ್‌ಲೈನ್ ಹಾಕುವ ಯೋಜನೆ ಇದಾಗಿದೆ. ಅದರಲ್ಲಿ 47 ಕಿ.ಮಿ ಮುಕ್ತಾಯವಾಗಿದೆ. ಒಟ್ಟು 4500 ಮನೆಗಳಿಗೆ ನಳ ಸಂಪರ್ಕ ನೀಡಬೇಕಿದ್ದು, ಈಗಾಗಲೇ 1100 ಮನೆಗಳಿಗೆ ಸಂಪರ್ಕ ನೀಡಲಾಗಿದೆ ಎಂದರು.

ಈ ವೇಳೆ ನಿವೃತ್ತ ಪೌರ ಕಾರ್ಮಿಕರಿಗೆ, ಪದೋನ್ನತಿ ಹೊಂದಿದ ಸಂಜು ಗುಡಿಮನಿ ಅವರಿಗೆ ಸನ್ಮಾನ ಜರುಗಿತು. ಸ್ಥಾಯಿ ಸಮಿತಿ ಚೇರಮನ್ ಮುತ್ತಪ್ಪ ನೂಲ್ಕಿ, ಕಿರಿಯ ಅಭಿಯಂತರ ವಿರೇಂದ್ರಸಿಂಗ್ ಕಾಟೇವಾಲ, ಸದಸ್ಯರು, ಸಿಬ್ಬಂದಿಯವರು ಇದ್ದರು.

## ಪಾಲಕರು ಮಕ್ಕಳಿಗಾಗಿ ಸಮಯ ಕೊಡಿ



■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಪಾಲಕರು ನಿಮ್ಮ ಮಕ್ಕಳಿಗೆ ಸಮಯ ನೀಡಿ. ಅವರೊಂದಿಗೆ ಮಾತನಾಡಿ, ತಮ್ಮ ಮಕ್ಕಳ ಪ್ರಗತಿಯನ್ನು ಸದಾ ಗಮನಿಸುತ್ತಿರಬೇಕು ಮತ್ತು ಶಿಕ್ಷಕರೊಂದಿಗೆ ಸಂಪರ್ಕದಲ್ಲಿದ್ದು ಅವರ ಕಲಿಕೆ ಮತ್ತು ನಡೆ-ನುಡಿಯ ಬಗ್ಗೆ ವಿಚಾರಿಸುತ್ತಿರಬೇಕು. ನಿಮ್ಮ ಸಮಯ ಮಕ್ಕಳಿಗೆ ಬಹಳ ಮುಖ್ಯ ಎಂದು ಗದಗ ಡೈಯಟ್‌ನ ಹಿರಿಯ ಉಪನ್ಯಾಸಕ ಕೆ.ಪಿ. ಸಾಲಿಮಠ ಹೇಳಿದರು.

ಸಮೀಪದ ಜಕ್ಕಲಿ ಗ್ರಾಮದ ಶ್ರೀ ಅಂದಾನಪ್ಪ ಜ್ಞಾನಪ್ಪ ದೊಡ್ಡಮೇಟಿ ಸರಕಾರಿ ಪ್ರೌಢಶಾಲೆಯ 8ನೇ ತರಗತಿಯ ವಿದ್ಯಾರ್ಥಿಗಳ/ಪಾಲಕರ ಸಭೆಯಲ್ಲಿ ಮುಖ್ಯ ಅತಿಥಿಯಾಗಿ ಪಾಲ್ಗೊಂಡು ಅವರು ಮಾತನಾಡಿದರು.

ವಿದ್ಯಾರ್ಥಿಗಳಿಗೆ ಅಕ್ಕರೆ, ಪ್ರೀತಿಯ ಜೊತೆಗೆ ಅವರ ಶೈಕ್ಷಣಿಕ ಕಾಳಜಿಯನ್ನು ವಹಿಸಬೇಕು. ಮಕ್ಕಳು ನಿರಂತರವಾಗಿ ಶಾಲೆಗೆ ಹಾಜರಾಗುವಂತೆ ಪಾಲಕರು ಎಚ್ಚರಿಕೆ ವಹಿಸಬೇಕು. ವಿದ್ಯಾರ್ಥಿಗಳು ಮನೆಯಿಂದ ಶಾಲೆಗೆ ಅಂತ ಹೊರಟು ಶಾಲೆಗೂ ಬಾರದೆ ಬೇರೆ ಎಲ್ಲಿಯೋ ಸಮಯ ಕಳೆಯುವ ಸಾಧ್ಯತೆ ಇರುತ್ತದೆ. ಹಾಗಾಗಿ ಪಾಲಕರು ಶಿಕ್ಷಕರೊಂದಿಗೆ ನಿರಂತರ ಸಂಪರ್ಕದಲ್ಲಿರಬೇಕು ಎಂದರು.

ಸಭೆಯ ಅಧ್ಯಕ್ಷತೆ ವಹಿಸಿದ್ದ ಶಾಲಾ ಮುಖ್ಯೋಪಾಧ್ಯಾಯ ಬಿ.ಆರ್. ಗದುಗಿನ ಮಾತನಾಡಿ, ಪಾಲಕ, ಶಿಕ್ಷಕ ಮತ್ತು ವಿದ್ಯಾರ್ಥಿ ಈ ಮೂವರ ಸಹಸಂಬಂಧ ಸರಿಯಾಗಿ ಏರ್ಪಟ್ಟಾಗ ಕಲಿಕೆ ಸೃಜಿಸುತ್ತದೆ. ವಿದ್ಯಾರ್ಥಿಗಳು ಶೈಕ್ಷಣಿಕ ಪ್ರಗತಿ ಸಾಧಿಸಬೇಕಾದಲ್ಲಿ ಪಾಲಕ ಹಾಗೂ ಶಿಕ್ಷಕರ ನಡುವಿನ ಸಮಾಗಮ ಅವಶ್ಯವಾಗಿದೆ. ಆದ್ದರಿಂದಲೇ ಪಾಲಕರ ಸಭೆ ನಡೆಸಲಾಗಿದೆ ಎಂದು ತಿಳಿಸಿದರು. ಪಾಲಕರ ಪ್ರತಿನಿಧಿಯಾಗಿ ಚನ್ನಮ್ಮ ಸಂಶಿ, ಬಸವರಾಜ ಚಿನ್ನೂರ ಪಾಲ್ಗೊಂಡಿದ್ದರು.

ಶಿಕ್ಷಕಿಯರಾದ ಯು.ಎಸ್. ಕಣವಿ, ಗೌರಮ್ಮ ಬಿಸನಳ್ಳಿ, ಅತಿಥಿ ಶಿಕ್ಷಕಿ ಸಾವಿತ್ರಿ ಸಂಗಟಿ, ಶಿಕ್ಷಕರಾದ ಆರ್.ಡಿ. ಬಡಿಗೇರ, ಮಂಜುನಾಥ ಹೂಗಾರ ಉಪಸ್ಥಿತರಿದ್ದರು.

ಶಿಕ್ಷಕ ನೆಹರು ಮನೋಳಿ ಪ್ರಾರ್ಥಿಸಿದರು. ಸುಧಾ ರೋಣದ ಹಾಗೂ ಸಂಗಡಿಗರು ಸ್ವಾಗತ ಗೀತೆ ಹಾಡಿದರು. ವಿ.ವಿ. ಅಣ್ಣಿಗೇರಿ ಕಾರ್ಯಕ್ರಮ ನಿರೂಪಿಸಿದರು.

# ದೇಶದಾದ್ಯಂತ ಪಕ್ಷ ಸಂಘಟನೆಗೆ ಯೋಜನೆ

▸▸ ಮೊದಲನೇ ಪುಟದಿಂದ

ಸಿದ್ದರಾಮಯ್ಯ, ಎಸ್.ಎಂ. ಕೃಷ್ಣ ಇವರೆಲ್ಲರೂ ಸಮಾಜವಾದ ಸಿದ್ಧಾಂತದಿಂದಲೇ ರಾಜಕೀಯ ಕ್ಷೇತ್ರದಲ್ಲಿ ಮೇಲೆ ಬಂದವರು ಎಂದರು.

2024ರ ಲೋಕಸಭಾ ಚುನಾವಣೆ ಫಲಿತಾಂಶ ಸಮಾಜವಾದಿ ಪಕ್ಷಕ್ಕೆ ಹೆಚ್ಚಿನ ಬಲ ತಂದಿದ್ದು, ರಾಜ್ಯದಲ್ಲೂ ಪಕ್ಷ ಸಂಘಟನೆಗೆ ಹೆಚ್ಚಿನ ಒತ್ತು ನೀಡಲಾಗಿದೆ.

ಮುಂಬರುವ ಎಲ್ಲ ಚುನಾವಣೆಗಳಲ್ಲೂ ಪಕ್ಷ ಸ್ವತಂತ್ರವಾಗಿ ಸ್ಪರ್ಧಿಸಲಿದೆ. 12ನೇ ಶತಮಾದ ಬಸವಣ್ಣನ ಕಾಲದಲ್ಲೇ ಸಮಾಜವಾದ ಪರಿಕಲ್ಪನೆ ಹುಟ್ಟಿತ್ತು. ಅದರ ಆಶಯದ ಮೇಲೆಯೇ ನಮ್ಮ ಪಕ್ಷ ರಾಜಕೀಯ ಹೋರಾಟ ನಡೆಸುತ್ತಿದೆ ಎಂದರು.

ಈ ಸಂದರ್ಭದಲ್ಲಿ ಸುಭಾಷ್ ಮುಂಡಗೋಡ, ತಿಪ್ಪೇಸ್ವಾಮಿ, ಶಂಕರ್ ಯಾದವ್, ಪ್ರಕಾಶ ಪೂಜಾರ್, ಆರ್.ವೇಣುಗೋಪಾಲ್, ಗೋವಿಂದರಾಜ ಪನ್ನೂರ ಇದ್ದರು.



ಕರ್ನಾಟಕ ವಕ್ಫ್ ಮಂಡಳಿ ರಾಜ್ಯ ಅಧ್ಯಕ್ಷ ಸ್ಥಾನಕ್ಕೆ ನೇಮಕವಾಗಿರುವ ಜನಾಬ ಸೈಯದ ಮುಹಮ್ಮದ ಅಲಿ ಅಲ್ ಹುಸೇನಿ ಇವರನ್ನು ಅಖಿಲ ಕರ್ನಾಟಕ ಮುಸ್ಲಿಂ ಮಹಾಸಭಾದ ರಾಜ್ಯಧ್ಯಕ್ಷ ಮಹ್ಮದಶಫಿ ನಾಗರಕಟ್ಟಿರವರು ಮಹಾಸಭಾದ ವತಿಯಿಂದ ಸನ್ಮಾನಿಸಿದರು. ಈ ಸಂದರ್ಭದಲ್ಲಿ ಧಾರವಾಡ ಮತ್ತು ಗದಗ ಜಿಲ್ಲಾ ಉಸ್ತುವಾರಿ ಮಹ್ಮಮದ ಜಾಫರ್ ಡಾಲಾಯತ್, ಮುನ್ನಾ ಕಲ್ಮನಿ, ಆಶಿಫ ಶೇಖ, ಅನೀಸ್ ಖತೀಬ್, ಫೈರೋಜ್ ಮುಜಾವರ ಮುಂತಾದ ಪದಾಧಿಕಾರಿಗಳು ಉಪಸ್ಥಿತರಿದ್ದರು.

### 'ವಚನ ಶ್ರಾವಣ-25' ಪ್ರಾರಂಭೋತ್ಸವದಲ್ಲಿ ಅಶೋಕ ಬರಗುಂಡಿ ಅಭಿಮತ

# ಜಗದ ತಲ್ಲಣಗಳಿಗೆ ವಚನ ಸಾಹಿತ್ಯವೇ ಉತ್ತರ

■ ವಿಜಯಸಾಕ್ಷಿ ಸುದ್ದಿ, ಗದಗ

ಬಸವಾದಿ ಪ್ರಮಥರ ಈ ನೆಲದಲ್ಲಿ ಶರಣರ ತತ್ವಗಳನ್ನು ಪಸರಿಸಲು ಮಠ-ಮಾನ್ಯಗಳ ಜೊತೆಗೆ ಬಸವ ಪರ ಸಂಘಟನೆಗಳು ನಿರಂತರ ಕಾರ್ಯಶೀಲವಾಗಿವೆ. ವಚನಗಳು ಲಿಂಗಾಯತ ನಿಜದ ನೆಲೆಯನ್ನು ತಿಳಿಸುವವು. ಬಸವಾದಿ ಶರಣರು ಕಟ್ಟಿಕೊಟ್ಟ ಅನುಭವ ಮಂಟಪದ ಭವ್ಯ ಸಂಸ್ಕೃತಿಯನ್ನು ಮನೆ ಮನೆಗಳಲ್ಲಿ ಅರುಹುವದೇ 'ವಚನ ಶ್ರಾವಣ' ಕಾರ್ಯಕ್ರಮದ ಮೂಲ ಉದ್ದೇಶವಾಗಿದೆ ಎಂದು ಶರಣ ತತ್ವ ಚಿಂತಕ ಅಶೋಕ ಬರಗುಂಡಿ ತಿಳಿಸಿದರು.

ಬಸವದಳದ, ಬಸವಕೇಂದ್ರ, ಲಿಂಗಾಯತ ಪ್ರಗತಿಶೀಲ ಸಂಘ ಸಂಘಟನೆಗಳ ಸಂಯುಕ್ತಾಶ್ರಯದಲ್ಲಿ ಆಂಜನೇಯ ಬಂಗಾರಪ್ಪ ಕಟಗಿ ಇವರ ಮನೆಯಲ್ಲಿ ನಡೆದ ಬಸವಣ್ಣನವರ 858ನೇ ಸ್ಮರಣೆಯಂಗವಾಗಿ ಮಾಸಪರ್ಯಂತ ನಡೆಯುವ 'ವಚನ ಶ್ರಾವಣ-2025'ರ ಉದ್ಘಾಟನಾ ಕಾರ್ಯಕ್ರಮದಲ್ಲಿ ಮಾತನಾಡಿದರು.



ನಮ್ಮ ಶರಣ ಪರಂಪರೆ ಬಹುದೊಡ್ಡದು. ಶರಣರ ಆಶಯವೇ ಸಮಸಮಾಜ ನಿರ್ಮಿತಿಯಾಗಿತ್ತು. ವಚನ ಸಾಹಿತ್ಯ ಸಂಗ್ರಹಿಸಿ ನಮಗೆ ನೀಡಿದ ಹಳಕಟ್ಟಿಯವರ ಕಾರ್ಯ ಸ್ಮರಣೀಯವಾದುದು. ಅದರಲ್ಲೂ ಅವರ ವಚನಗಳ ಸ್ಥಲಕ್ಕನುಸಾರವಾದ ಜೋಡಣೆ ಕೂಡಾ ಅದ್ಭುತವಾಗಿದೆ. ಶರಣ ಸಂಸ್ಕೃತಿಯ ಸರ್ವರೂ ಅವರನ್ನು ನೆನೆಯಬೇಕಾಗಿದೆ. ಈ ಜೀವ ಜಗತ್ತಿನ ಸರ್ವ ತಲ್ಲಣಗಳಿಗೆ ವಚನ ಸಾಹಿತ್ಯ ಉತ್ತರದಾಯಿನಿಯಾಗಿದೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಬಸವದಳದ ಅಧ್ಯಕ್ಷ ವಿ.ಕೆ. ಕರೀಗೌಡ್ರ ಪ್ರಾಸ್ತಾವಿಕವಾಗಿ ಮಾತನಾಡಿದರು. ಆರಂಭದಲ್ಲಿ ಷಟಸ್ಥಲ ಧ್ವಜಾರೋಹಣವನ್ನು ಕಟಗಿ ಮನೆತನದ ಹಿರಿಯರಾದ ಬಂಗಾರಪ್ಪನವರು ನೆರವೇರಿಸಿದರು. ಧ್ವಜ ಗೀತೆಯನ್ನು ಬಸವದಳದ ಶರಣೆಯರು ಹಾಡಿದರು. ಆಂಜನೇಯ ಕಟಗಿ ಸ್ವಾಗತಿಸಿದರು. ಎಸ್.ಎ. ಮುಗದ ಸಂವಿಧಾನ ಪೀಠಿಕೆಯನ್ನು ಓದಿಸಿದರು. ಅಶ್ವಿನಿ ಕಟಗಿಯವರಿಂದ ವಚನ ಪಠಣ ಜರುಗಿತು. ಗದಗ ಜಿಲ್ಲೆಯ ಜಾಗತಿಕ ಲಿಂಗಾಯತ ಮಹಾಸಭೆಯ ಅಧ್ಯಕ್ಷ ಕೆ.ಎಸ್. ಚೆಟ್ಟಿ ವಚನ ಶ್ರಾವಣದ ಕಿರುಹೊತ್ತಿಗೆಯನ್ನು ಬಿಡುಗಡೆ ಮಾಡಿ ವಚನ ಓದುವ ಮೂಲಕ ಉದ್ಘಾಟಿಸಿದರು.

'ವಚನ ಶ್ರಾವಣ' ಹೊತ್ತಿಗೆಯನ್ನು ಬಿ.ವಿ. ಕಾಮಣ್ಣನವರ ಸ್ಮರಣಾರ್ಥ ಮಂಗಳಾ ಕಾಮಣ್ಣವರ ಹಾಗೂ ಚೆನ್ನಬಸವಣ್ಣ ಕಾಮಣ್ಣವರ ಗ್ರಂಥದಾಸೋಹ ಮಾಡಿದರು. ವಚನ ಚಿಂತಕರಿಗೆ 'ವಚನ ಹೃದಯ' ಗ್ರಂಥವನ್ನು ಲಿಂ. ಶಂಕ್ರಣ್ಣ ಅಂಗಡಿ ಇವರ ಸ್ಮರಣಾರ್ಥ ಇವರ ಧರ್ಮಪತ್ನಿ ಲಕ್ಷ್ಮೀ ಅಂಗಡಿ, ಶರಣು ಅಂಗಡಿ ದಾಸೋಹಗೈದರು. 'ಬಸವಣ್ಣ ಯಾಕೆ ಬೇಕು' ಗ್ರಂಥವನ್ನು ಶೇಖಣ್ಣ ಕವಳಿಕಾಯಿ ಹಾಗೂ ವಿಭೂತಿ ದಾಸೋಹವನ್ನು ಮಂಜುಳಾ ಹಾಸಿಲಕರ ವಹಿಸಿಕೊಂಡಿದ್ದರು. ಗೌರಕ್ಕಾ ಬಡಿಗಣ್ಣನವರ ಶರಣು ಸಮರ್ಪಣೆ ಮಾಡಿದರು. ಪ್ರಕಾಶ ಅಸುಂಡಿ ನಿರೂಪಿಸಿದರು.

ಶ್ರೀಗುರು ಬಸವೇಶ್ವರಮಠದ ಮ.ನಿ.ಪ್ರ. ಡಾ. ಮಹಾಂತ ಬಸವಲಿಂಗ ಸ್ವಾಮೀಜಿ ಮಾತನಾಡಿ, ಈ ಜಗತ್ತಿನಲ್ಲಿ ಅನೇಕ ಧರ್ಮಗಳಿವೆ. ಅವುಗಳು ತಮ್ಮದೇ ಸಿದ್ಧಾಂತ ಹೊಂದಿವೆ. ಆದರೆ ಅವೆಲ್ಲಕ್ಕಿಂತಲೂ ಭಿನ್ನವಾದ ಧರ್ಮ ಲಿಂಗಾಯತವಾಗಿದೆ. ಬಸವಾದಿ ಶರಣರು ನುಡಿದು, ಹಾಗೆಯೇ ನಡೆದು ತೋರಿಸಿದರು. ಹಲವು ಜಾತಿ, ಧರ್ಮಗಳಲ್ಲಿ ಪ್ರಾಣಿ ಬಲಿಯಂತಹ ಪದ್ಧತಿ ಈಗಲೂ ಇದೆ. ಪ್ರಾಣಿಗಳನ್ನು ಕೊಂದು ತಿಂದರೆ ದೇವರು ಸಂತೃಪ್ತನಾಗುವನೆಂಬ ಭಾವ ತುಂಬಿದೆ. ಅಲ್ಲಿ ಕರುಣೆ ಇಲ್ಲವೇ ಇಲ್ಲ. ಆದರೆ ಬಸವಣ್ಣ ಧರ್ಮ ಇದಕ್ಕೆ ವ್ಯತಿರಿಕ್ತವಾಗಿದೆ. ಅಲ್ಲಿ ಕರುಣೆ ತುಂಬಿದೆ. ದಯವೇ ಧರ್ಮವಾಗಿದೆ ಎಂದರು.

# ಜು.28ರಂದು ಸರ್ಕಾರಿ ಪ್ರೌಢಶಾಲೆ ನೂತನ ಕಟ್ಟಡದ ಉದ್ಘಾಟನೆ

■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಸರ್ಕಾರ, ಶಾಲಾ ಶಿಕ್ಷಣ ಇಲಾಖೆ, ರೋಣ, ಸರ್ಕಾರಿ ಪ್ರೌಢಶಾಲೆ, ಮುಗಳಿ ಇವರ ಸಹಯೋಗದಲ್ಲಿ ಆರ್.ಎಮ್.ಎಸ್.ಎ. ಸರ್ಕಾರಿ ಪ್ರೌಢ ಶಾಲಾ ನೂತನ ಕಟ್ಟಡದ ಉದ್ಘಾಟನಾ ಸಮಾರಂಭವನ್ನು ಜುಲೈ 28 ರಂದು ಅಪರಾಹ್ನ 2 ಗಂಟೆಗೆ ರೋಣ ತಾಲೂಕಿನ ಮುಗಳಿ ಸರ್ಕಾರಿ ಪ್ರೌಢಶಾಲಾ (ಆರ್.ಎಂ.ಎಸ್.ಎ ) ಆವರಣದಲ್ಲಿ ಹಮ್ಮಿಕೊಳ್ಳಲಾಗಿದೆ.

ವಿಧಾನ ಪರಿಷತ್ ಸಭಾಪತಿ ಬಸವರಾಜ್ ಹೊರಟ್ಟಿ , ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು , ಸಂಸದೀಯ ವ್ಯವಹಾರಗಳು, ಶಾಸನ ರಚನೆ, ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ.ಪಾಟೀಲ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಸಚಿವ ಮಧು ಬಂಗಾರಪ್ಪ ಅವರು ಕಾರ್ಯಕ್ರಮದ ಘನ ಉಪಸ್ಥಿತಿ ವಹಿಸಲಿದ್ದಾರೆ.

ಕರ್ನಾಟಕ ಖನಿಜ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರು ಹಾಗೂ ರೋಣ ಶಾಸಕರಾದ ಜಿ.ಎಸ್.ಪಾಟೀಲ ಕಾರ್ಯಕ್ರಮ ಉದ್ಘಾಟಿಸುವರು.

ಮುಖ್ಯ ಅತಿಥಿಗಳಾಗಿ ಮಾಜಿ ಮುಖ್ಯಮಂತ್ರಿ ಹಾಗೂ ಹಾವೇರಿ ಸಂಸದರಾದ ಬಸವರಾಜ್ ಬೊಮ್ಮಾಯಿ, ಸರ್ಕಾರಿ ಮುಖ್ಯ ಸಚೇತಕ ಹಾಗೂ ವಿಧಾನ ಪರಿಷತ್ ಶಾಸಕರಾದ ಸಲೀಂ ಅಹ್ಮದ್, ಬಾಗಲಕೋಟಿ ಸಂಸದರಾದ ಪಿ.ಸಿ.ಗದ್ದಿಗೌಡರ, ವಿಧಾನ ಪರಿಷತ್ ಶಾಸಕ ಎಸ್.ವಿ.ಸಂಕನೂರ, ಪ್ರದೀಪ್ ಶೆಟ್ಟರ್, ಶಾಸಕರಾದ ಸಿ.ಸಿ.ಪಾಟೀಲ, ಚಂದ್ರು ಲಮಾಣಿ, ಕೊತಬಾಳ ಗ್ರಾ.ಪಂ. ಅಧ್ಯಕ್ಷರಾದ ಶ್ರೀಮತಿ ಭೀಮವ್ವ ಗುಳಗುಳಿ, ರೋಣ ತಾಲೂಕಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ಮಿಥುನ್ ಜಿ ಪಾಟೀಲ, ಕೊತಬಾಳ ಗ್ರಾ.ಪಂ ಉಪಾಧ್ಯಕ್ಷ ಹನಮಪ್ಪ ಅಸೂಟಿ, ಆಗಮಿಸುವರು.

ವಿಶೇಷ ಆಹ್ವಾನಿತರಾಗಿ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಪ್ರಧಾನ ಕಾರ್ಯದರ್ಶಿ ಶ್ರೀಮತಿ ವಿ.ರಶ್ಮಿ ಮಹೇಶ, ಯೋಜನಾ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಕಾರ್ಯದರ್ಶಿಗಳು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ರಮಣದೀಪ್ ಚೌಧರಿ, ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ , ಜಿ.ಪಂ. ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್ , ಶಾಲಾ ಶಿಕ್ಷಣ ಇಲಾಖೆಯ ಅಪರ ಆಯುಕ್ತ ಡಾ. ಈಶ್ವರ ಉಳ್ಳಾಗಡ್ಡಿ , ಶಾಲಾ ಶಿಕ್ಷಣ ಇಲಾಖೆ ( ಆಡಳಿತ) ಯ ಉಪನಿರ್ದೇಶಕ ಆರ್.ಎಸ್.ಬುರುಡಿ, ಶಾಲಾ ಶಿಕ್ಷಣ ಇಲಾಖೆ ( ಅಭಿವೃದ್ಧಿ) ಜಿ.ಎಲ್.ಬಾರಾಟಕ್ಕೆ, ಎಸ್.ಎಸ್.ಕೆ. ಉಪಯೋಜನಾ ಸಮನ್ವಯಾಧಿಕಾರಿ ಎಮ್.ಎಚ್.ಕಂಬಳಿ, ಆರ್.ಎಮ್.ಎಸ್.ಎ ಉಪಯೋಜನಾ ಸಮನ್ವಯಾಧಿಕಾರಿ ರವಿ ಪ್ರಕಾಶ, ಎಸ್.ಎಸ್.ಕೆ. ಸಹಾಯಕ ಯೋಜನಾ ಸಮನ್ವಯಾಧಿಕಾರಿ ಡಾ.ಶರಣು ಗೋಗೇರಿ ಹಾಗೂ ಶಿವಕುಮಾರ್ ಕುರಿಯವರ ಆಗಮಿಸಲಿದ್ದಾರೆ.

ವಿಶ್ರಾಂತ ಉಪನಿರ್ದೇಶಕ ಎಂ.ಎ.ರಡ್ಡೇರ,ವಿಶ್ರಾಂತ ವಿಸ್ತೀರ್ಣಾಧಿಕಾರಿ ಶಾಸಪ್ಪ ಲ ಉಪ್ಪಾರ, ಗ್ರಾಮದ ಹಿರಿಯರಾದ ಎಂ.ಎಸ್. ದೇಸಾಯಿ, ಬಸವರಾಜ್ ಉಸಲಕೊಪ್ಪದ, ಯಲ್ಲಪ್ಪ ಕುರಿ, ಮುದಿಯಪ್ಪ ಶಿ ಹಿರೇಮನಿ , ಶ್ರೀಮತಿ ಗುರುಬಸಮ್ಮ ಶಾಂತಯ್ಯ ಹಿರೇಮಠ ಅವರನ್ನು ಸನ್ಮಾನಿಸಲಾಗುವುದು.

ರೋಣ ಕ್ಷೇತ್ರ ಶಿಕ್ಷಣಾಧಿಕಾರಿ ಅರ್ಜುನ್ ಕಂಬೋಗಿ, ರೋಣ ತಾ.ಪಂ. ಕಾರ್ಯನಿರ್ವಾಹಕ ಅಧಿಕಾರಿ ಚಂದ್ರಶೇಖರ್ ಕಂದಕೂರ, ರೋಣ ಲೋಕೋಪಯೋಗಿ ಇಲಾಖೆಯ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರಾದ ಜಿ.ಎಸ.ಪಾಟೀಲ, ರೋಣ ಕ್ಷೇತ್ರ ಸಮನ್ವಯಾಧಿಕಾರಿ ಎಂ.ಎ. ಫಣಿಬಂದ, ಕೊತಬಾಳ ಗ್ರಾ.ಪಂ. ಅಭಿವೃದ್ಧಿ ಅಧಿಕಾರಿ ರಿಯಾಜ್ ಖತೀಬ್, ಮುಗಳಿ ಸರ್ಕಾರಿ ಪ್ರೌಡಶಾಲೆ ಎಸ್.ಡಿ.ಎಂ.ಸಿ. ಅಧ್ಯಕ್ಷ ಮಲ್ಲಿಕಾರ್ಜುನ ಖವಾಸ್ತ , ಮುಗಳಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಎಸ್.ಡಿ.ಎಂ.ಸಿ ಅಧ್ಯಕ್ಷ ಮುದಿಯಪ್ಪ ರಾ. ಬಿಸಾಟಿ, ಮುಗಳಿ ಸರ್ಕಾರಿ ಪ್ರೌಢಶಾಲೆಯ ಮುಖ್ಯೋಪಾಧ್ಯಾಯರಾದ ಪಿ.ಎ.ಹುನಗುಂದ, ಮುಗಳಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಮುಖ್ಯೋಪಾಧ್ಯಾಯರಾದ ಆರ್.ಟಿ. ಆರೇರ ಸ್ವಾಗತ ಕೋರಿದ್ದಾರೆ.

# ಮಕ್ಕಳಿಗೆ ಅಮೃತ ಭೋಜನ ಕಾರ್ಯ ಶ್ಲಾಘನೀಯ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಶ್ರಾವಣ ಮಾಸದ ಒಂದು ತಿಂಗಳು ಸರ್ಕಾರಿ ಶಾಲೆಯ ವಿದ್ಯಾರ್ಥಿಗಳಿಗೆ ಪ್ರತಿನಿತ್ಯ ಅಮೃತ ಭೋಜನ ನೀಡುತ್ತಿರುವ ಈ ಶಾಲೆಯ ಶಿಕ್ಷಕರ ಕಾರ್ಯ ಶ್ಲಾಘನೀಯ ಎಂದು ಅಮೃತ ಭೋಜನದ ದಾನಿ ಶಶಿಧರ ಸಂಕನಗೌಡ್ರ ಹೇಳಿದರು.

ಪಟ್ಟಣದ ಕೆ.ಜಿ.ಎಂ.ಎಸ್ ಶಾಲೆಯಲ್ಲಿ ಶುಕ್ರವಾರದಿಂದ ಪ್ರಾರಂಭವಾದ ಶ್ರಾವಣದ ಅಮೃತ ಭೋಜನದ ಮೊದಲ ದಿನದ ಆತಿಥ್ಯವನ್ನು ವಹಿಸಿಕೊಂಡು ಅವರು ಮಾತನಾಡಿದರು. ಸರ್ಕಾರಿ ಹಾಗೂ ಖಾಸಗಿ ಶಾಲೆಯಲ್ಲಿ ಬಡ ವಿದ್ಯಾರ್ಥಿಗಳಿದ್ದರೆ ಅವರಿಗೆ ಪುಸ್ತಕ ಅಥವಾ ವಿದ್ಯಾಭ್ಯಾಸಕ್ಕೆ ಬೇಕಾದ ಸಲಕರಣೆಗಳನ್ನು ಕೊಡಿಸುತ್ತೇನೆ. ವಿದ್ಯಾರ್ಥಿಗಳ ಸರ್ವತೋಮುಖ ಬೆಳವಣಿಗೆಯಲ್ಲಿ ಶಿಕ್ಷಕರ ಹಾಗೂ ಪೋಷಕರ ಪಾತ್ರ ಹೆಚ್ಚಿದೆ.



ಪ್ರತಿಯೊಬ್ಬರಿಗೂ ಉಚಿತ ಶಿಕ್ಷಣ ಸಿಗಲು ಸರ್ಕಾರಿ ಶಾಲೆಗಳನ್ನು ಉಳಿಸಿ ಅಭಿವೃದ್ಧಿಪಡಿಸಬೇಕು ಎಂದರು.

ನರೇಗಲ್ಲ ಕಾನಿಪ ಸಂಘದ ಅಧ್ಯಕ್ಷ ಆದರ್ಶ ಕುಲಕರ್ಣಿ ಮಾತನಾಡಿ, ಜೀವನದಲ್ಲಿ ಯಶಸ್ಸು ಕಾಣಬೇಕೆಂದರೆ ಅದಕ್ಕೆ ಶಿಕ್ಷಣವೊಂದೇ ತಳಹದಿ. ಸರ್ಕಾರಿ ಶಾಲೆಯಲ್ಲಿ ಸುಮಾರು ಶೇ. 80ರಷ್ಟು ಬಡ ಮಕ್ಕಳು ಇರುವರು. ಮಕ್ಕಳಲ್ಲಿ ಓದಿನ ಜತೆಗೆ ಅಮೃತ ಭೋಜನ ಯೋಜನೆ ಮಾಡಿರುವುದು ಶಿಕ್ಷಕರ ಅಭೂತಪೂರ್ವ ಕಾರ್ಯವಾಗಿದೆ ಎಂದರು. ಮುಖ್ಯ ಶಿಕ್ಷಕ ಬಸವರಾಜ ಕುರಿ ಮಾತನಾಡಿ, ಕಳೆದ ಮೂರು ವರ್ಷಗಳಿಂದ ಈ ಯೋಜನೆ ಸಾಂಗವಾಗಿ ನಡೆದುಕೊಂಡು ಬಂದಿದೆ. ಇದರಿಂದ ವಿದ್ಯಾರ್ಥಿಗಳ ಹಾಜರಾತಿ ಕೂಡ ಹೆಚ್ಚಾಗುತ್ತಿದೆ ಎಂದರು. ಈ ಸಂದರ್ಭದಲ್ಲಿ ಎಸ್‌ಡಿಎಂಸಿ ಸದಸ್ಯ ಅಂದಾನಗೌಡ ಲಕ್ಕನಗೌಡ್ರ, ಈಶ್ವರ ಬೆಟಗೇರಿ, ಚಂದ್ರು ರಾಠೋಡ್, ಎನ್.ಎಲ್. ಚವ್ಹಾಣ, ಎಂ.ಪಿ. ಅಣಗೌಡರ, ಡಿ.ವಿ. ಕಳ್ಳಿ, ಜೆ.ಎ. ಪಾಟೀಲ, ಎಂ.ಎಸ್. ಮಾಳಶೆಟ್ಟಿ, ಎಸ್.ಐ. ಜಗಾಪೂರ, ರಾಜೇಶ್ವರಿ ತೊಂಡಿಹಾಳ ಇದ್ದರು.

# ಶಾಲಾ ಸಂಸತ್ತಿನಿಂದ ಪ್ರಜಾಸತ್ತಾತ್ಮಕ ಮೌಲ್ಯಗಳ ಅರಿವು



■ ವಿಜಯಸಾಕ್ಷಿ ಸುದ್ದಿ, ಗದಗ

ಪ್ರಜಾಸತ್ತಾತ್ಮಕ ಮೌಲ್ಯಗಳನ್ನು ಅರಿತುಕೊಳ್ಳುವಲ್ಲಿ ಹಾಗೂ ಅದರ ಸದುಪಯೋಗ ಪಡೆದುಕೊಳ್ಳುವಲ್ಲಿ ಶಾಲಾ ಸಂಸತ್ತು ಅತ್ಯಗತ್ಯ ಎಂದು ಬೆಟಗೇರಿಯ ಎಸ್.ಎಸ್.ಕೆ ಶ್ರೀ ಜಗದಂಬಾ ಶಿಕ್ಷಣ ಸಂಸ್ಥೆಯ ಚೇರಮನ್ ಜಿ.ವಿ. ಬಸವಾ ಅಭಿಪ್ರಾಯಪಟ್ಟರು.

ಅವರು ಬೆಟಗೇರಿಯ ಎಸ್.ಎಸ್.ಕೆ ಜಗದಂಬಾ ಶಿಕ್ಷಣ ಸಂಸ್ಥೆಯಲ್ಲಿ ಜರುಗಿದ ಶಾಲಾ ಮಕ್ಕಳ ಸಂಸತ್ತಿನ ಪ್ರತಿಜ್ಞಾವಿಧಿ ಸಮಾರಂಭದಲ್ಲಿ ಮಾತನಾಡಿದರು.

ಎಸ್.ಎಸ್.ಕೆ ಪಂಚ ಟ್ರಸ್ಟ್ ಕಮಿಟಿ ಅಧ್ಯಕ್ಷ ಲೋಕನಾಥ ಕಬಾಡಿ ಮಾತನಾಡಿ, ಮಕ್ಕಳಲ್ಲಿ ನಾಯಕತ್ವ ಹಾಗೂ ಜವಾಬ್ದಾರಿ ನಿರ್ವಹಣಾ ಸಾಮರ್ಥ್ಯ ಅಭಿವೃದ್ಧಿಪಡಿಸುವ ಅಗತ್ಯತೆಯಿದೆ. ಮಕ್ಕಳಲ್ಲಿ ಇಂತಹ ಗುಣಗಳನ್ನು ಬೆಳೆಸುವಲ್ಲಿ ಮಕ್ಕಳ ಸಂಸತ್ತು ಪ್ರಮುಖ ಪಾತ್ರ ವಹಿಸುತ್ತದೆ ಎಂದರು.

ಪಂಚ ಟ್ರಸ್ಟ್ ಕಮಿಟಿಯ ಉಪಾಧ್ಯಕ್ಷ ದತ್ತು ಪವಾರ ಮಾತನಾಡಿ, ಶಾಲಾ ಸಿಬ್ಬಂದಿ ಜೊತೆ ಶಾಲಾ ನಿರ್ವಹಣೆಯಲ್ಲಿ ಮಕ್ಕಳನ್ನೂ ಪಾಲುದಾರರನ್ನಾಗಿ ಮಾಡುವುದು ಶಾಲಾ ಸಂಸತ್ತಿನ ರಚನೆಯ ಮುಖ್ಯ ಉದ್ದೇಶವಾಗಿದೆ ಎಂದರು. ಶಾಲಾ ಸಂಸತ್ತಿಗೆ ಆಯ್ಕೆಯಾದ ಮಕ್ಕಳಿಗೆ ಪ್ರತಿಜ್ಞಾವಿಧಿ ಬೋಧಿಸಲಾಯಿತು. ಕಾರ್ಯಕ್ರಮದಲ್ಲಿ ಬೆಟಗೇರಿ ಎಸ್.ಎಸ್.ಕೆ ಪಂಚ ಟ್ರಸ್ಟ್ ಕಮಿಟಿ, ತರುಣ ಸಂಘ, ಮಹಿಳಾ ಮಂಡಳದ ಪದಾಧಿಕಾರಿಗಳು, ಸದಸ್ಯರು ಹಾಗೂ ಎಸ್.ಎಸ್.ಕೆ ಶ್ರೀ ಜಗದಂಬಾ ಶಿಕ್ಷಣ ಸಂಸ್ಥೆಯ ಆಡಳಿತ ಮಂಡಳಿ ಸದಸ್ಯರು, ಬೋಧಕ-ಬೋಧಕೇತರ ಸಿಬ್ಬಂದಿ ವರ್ಗದವರು, ಪಾಲಕರು ಹಾಗೂ ಮಕ್ಕಳು ಹಾಜರಿದ್ದರು.

# ರಾಜಸ್ಥಾನದಲ್ಲಿ ಶಾಲೆ ಮೇಲ್ಛಾವಣಿ ಕುಸಿತ: ಕನಿಷ್ಠ ಆರು ವಿದ್ಯಾರ್ಥಿಗಳು ಸಾವು; ಹಲವರು ಸಿಲುಕಿರುವ ಶಂಕೆ

■ ವಿಜಯಸಾಕ್ಷಿ ಸುದ್ದಿ, ರಾಜಸ್ಥಾನ

ರಾಜಸ್ಥಾನದ ಝಲಾವರ್ ಜಿಲ್ಲೆಯಲ್ಲಿ ಶುಕ್ರವಾರ (ಜುಲೈ 25, 2025) ಸರ್ಕಾರಿ ಶಾಲಾ ಕಟ್ಟಡದ ಒಂದು ಭಾಗ ಕುಸಿದು ಬಿದ್ದಿದ್ದು, ಆರು ಮಕ್ಕಳು ಸಾವನ್ನಪ್ಪಿ, 29 ಜನರು ಗಾಯಗೊಂಡಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.

ಘಟನೆ ನಡೆದಾಗ ಜಿಲ್ಲೆಯ ಮನೋಹರ್ಥಾನ ಬ್ಲಾಕ್‌ನಲ್ಲಿರುವ ಪಿಪ್ಲೋಡ್ ಸರ್ಕಾರಿ ಶಾಲೆಯಲ್ಲಿ ಮಕ್ಕಳು ಬೆಳಗಿನ ಪ್ರಾರ್ಥನೆಗಾಗಿ ಸೇರುತ್ತಿದ್ದರು. ಘಟನೆ ನಡೆದಾಗ ಕಟ್ಟಡದಲ್ಲಿ ಸುಮಾರು 35 ವಿದ್ಯಾರ್ಥಿಗಳಿದ್ದರು ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಇದಕ್ಕೂ ಮೊದಲು, ಝಲಾವರ್‌ನ ಪೊಲೀಸ್ ವರಿಷ್ಠಾಧಿಕಾರಿ ಅಮಿತ್ ಕುಮಾರ್ ಮಾತನಾಡಿ, "ನಾಲ್ಕು ಮಕ್ಕಳು ಸಾವನ್ನಪ್ಪಿದ್ದಾರೆ, 17 ಇತರರು ಗಾಯಗೊಂಡಿದ್ದಾರೆ. ಹತ್ತು ಮಕ್ಕಳನ್ನು ಝಲಾವರ್‌ಗೆ ಕಳುಹಿಸಲಾಗಿದೆ, ಅವರಲ್ಲಿ ಮೂರರಿಂದ ನಾಲ್ವರು ಗಂಭೀರ ಸ್ಥಿತಿಯಲ್ಲಿದ್ದಾರೆ" ಎಂದು ಹೇಳಿದರು.

ಶಿಕ್ಷಕರು ಮತ್ತು ಗ್ರಾಮಸ್ಥರ ಸಹಾಯದಿಂದ ಮಕ್ಕಳನ್ನು ಅವಶೇಷಗಳಿಂದ ಹೊರತೆಗೆಯಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ರಾಜಸ್ಥಾನದ ಶಾಲಾ ಕಟ್ಟಡ ಕುಸಿತ ಘಟನೆಯಲ್ಲಿ ಪ್ರಾಣಹಾನಿಗೆ ಪ್ರಧಾನಿ ನರೇಂದ್ರ ಮೋದಿ ಸಂತಾಪ ಸೂಚಿಸಿದ್ದಾರೆ. "ರಾಜಸ್ಥಾನದ ಝಲಾವರ್‌ನ ಶಾಲೆಯಲ್ಲಿ ಸಂಭವಿಸಿದ ಅಪಘಾತವು ದುರಂತ ಮತ್ತು ತೀವ್ರ ದುಃಖಕರವಾಗಿದೆ. ಈ ಕಷ್ಟದ ಸಮಯದಲ್ಲಿ ಸಂತ್ರಸ್ತ ವಿದ್ಯಾರ್ಥಿಗಳು ಮತ್ತು ಅವರ ಕುಟುಂಬಗಳೊಂದಿಗೆ ನನ್ನ ಆಲೋಚನೆಗಳು ಇವೆ" ಎಂದು ಪ್ರಧಾನಿ ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ್ದಾರೆ.

# ರಾಜ್ಯದಲ್ಲಿ ಮರುಗಣತಿ ಮಾಡಲು ಕ್ರಮ

▸▸ ಮೊದಲನೇ ಪುಟದಿಂದ

ಬಗ್ಗೆ ಬಿಜೆಪಿ ಮಾಡಿರುವ ಆರೋಪದ ಬಗ್ಗೆ ಪ್ರತಿಕ್ರಿಯೆ ನೀಡಿದ ಮುಖ್ಯಮಂತ್ರಿಗಳು, ಬಿಜೆಪಿಯವರು ಸಾಮಾಜಿಕ ನ್ಯಾಯದ ಪರವಾಗಿ ಎಂದೂ ಇರಲಿಲ್ಲ.

ಮಂಡಲ್ ಆಯೋಗದ ವರದಿಯನ್ನು ಬಿಜೆಪಿ ವಿರೋಧಿಸಿತ್ತು.

ಮಂಡಲ್‌ಗೆ ಪ್ರತಿಯಾಗಿ ಕಮಂಡಲ ಯಾತ್ರೆ ಶುರು ಮಾಡಿದ್ದು ಯಾರು, ಆ ಸಂದರ್ಭದಲ್ಲಿ 200 ಆತ್ಮಹತ್ಯೆಗಳಿಗೆ ಪ್ರಚೋದನೆ ಕೊಟ್ಟವರು ಯಾರು, 1993ರಲ್ಲಿ ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ ಮೀಸಲಾತಿಯನ್ನು ಜಾರಿಗೆ ತಂದಾಗ ಅದನ್ನು ವಿರೋಧಿಸಿದ್ದು ಯಾರು ಎಂದು ಪ್ರಶ್ನಿಸಿದ ಸಿದ್ದರಾಮಯ್ಯ, ಬಿಜೆಪಿಯವರು ಸಂವಿಧಾನವನ್ನು ಯಾವಾಗ ಗೌರವಿಸಿದ್ದಾರೆ ಎಂದು ಕಿಡಿಕಾರಿದರು.



# ಜಿ.ಪಂ ಸಿಇಓ ಭೇಟಿ, ಪರಿಶೀಲನೆ



■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಕುಂದಗೋಳ ತಾಲೂಕಿನ ಹೀರೆಹರಕುಣಿ, ಮುತ್ತಿಗಟ್ಟಿ, ರಾಮನಕೊಪ್ಪ ಗ್ರಾಮ ಪಂಚಾಯಿತಿಗಳಿಗೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ್ ಪಾಟೀಲ್ ಭೇಟಿ ನೀಡಿ, ವಿವಿಧ ಕಾಮಗಾರಿಗಳ ಪರಿಶೀಲನೆ ನಡೆಸಿದರು.

ಗ್ರಾಮೀಣ ಕುಡಿಯುವ ನೀರು ಸರಬರಾಜು ಯೋಜನೆಯಡಿ ಮನೆಗಳಿಗೆ ಒದಗಿಸಲಾದ ನೀರಿನ ಕೊಳವೆ ಸಂಪರ್ಕಗಳ ಗುಣಮಟ್ಟ, ನೀರಿನ ಮೀಟರ್‌ಗಳ ಸ್ಥಾಪನೆ, ನೀರು ಸರಬರಾಜಿನ ಸ್ಥಿರತೆ ಮತ್ತು ಫೀಲ್ಡ್ ಟೆಸ್ಟ್ ಕಿಟ್‌ಗಳ ಮೂಲಕ ನೀರಿನ ಗುಣಮಟ್ಟ ಪರೀಕ್ಷೆಯಂತಹ ಅಂಶಗಳನ್ನು ಪರಿಶೀಲಿಸಿದರು. ಬಳಿಕ ಮುತ್ತಿಗಟ್ಟಿ ಗ್ರಾಮದ ಸರ್ಕಾರಿ ಪ್ರಾಥಮಿಕ ಹಾಗೂ ಪ್ರೌಢಶಾಲೆಗೆ ಭೇಟಿ ನೀಡಿ, ಮಕ್ಕಳೊಂದಿಗೆ ಮಧ್ಯಾಹ್ನದ ಬಿಸಿಯೂಟ ಸವಿದರು. ಅಡುಗೆ ಸಿಬ್ಬಂದಿಗಳು ಸ್ವಚ್ಛತೆ ಕಾಪಾಡಬೇಕು. ಕೂಸಿನ ಮನೆಗಳಲ್ಲಿ ಕಡ್ಡಾಯವಾಗಿ ಮಕ್ಕಳಿಗೆ ಮೂಲ ಸೌಕರ್ಯ ಇರುವಂತೆ ನೋಡಿಕೊಳ್ಳಬೇಕು. ಮಕ್ಕಳಿಗೆ ಪೌಷ್ಟಿಕ ಆಹಾರ ಒದಗಿಸುವ ಕುರಿತು ಸಂಬಂಧಿಸಿದವರು ನಿಗಾ ವಹಿಸಬೇಕು ಎಂದು ಸೂಚಿಸಿದರು.

ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಕಾರ್ಯಪಾಲಕ ಅಭಿಯಂತರ ಜಗದೀಶ್, ಕುಂದಗೋಳ ತಾಲೂಕಿನ ಕಾರ್ಯನಿರ್ವಾಹಕ ಅಧಿಕಾರಿ ಜಗದೀಶ್, ಸಹಾಯಕ ನಿರ್ದೇಶಕರು, ಅಭಿಯಂತರರು, ಶಿಕ್ಷಕರು, ಗ್ರಾ.ಪಂ ಚುನಾಯಿತ ಪ್ರತಿನಿಧಿಗಳು, ಪಿಡಿಒ ಸೇರಿದಂತೆ ಗ್ರಾಮಸ್ಥರು ಉಪಸ್ಥಿತರಿದ್ದರು.

### ಜಿಲ್ಲಾ ಮಟ್ಟದ ಆಧಾರ್ ಮೇಲ್ವಿಚಾರಣಾ ಸಮಿತಿ ಸಭೆಯಲ್ಲಿ ಡಿಸಿ ಸಿ.ಎನ್.ಶ್ರೀಧರ್

# ಆಧಾರ್-ಮೊಬೈಲ್ ಸಂಖ್ಯೆ ಲಿಂಕ್ ಅತ್ಯಗತ್ಯ



■ ವಿಜಯಸಾಕ್ಷಿ ಸುದ್ದಿ, ಗದಗ

ಆಧಾರ್ ಕಾರ್ಡ್ ಪ್ರತಿಯೊಬ್ಬ ಭಾರತೀಯ ನಾಗರಿಕನಿಗೆ ಒಂದು ವಿಶಿಷ್ಟ ಗುರುತಿನ ಚೀಟಿಯಾಗಿದೆ. ಆಧಾರ್ ಕಾರ್ಡ್ ವ್ಯಕ್ತಿಯ ಗುರುತಿನ ಮತ್ತು ವಿಳಾಸದ ಪುರಾವೆಯಾಗಿದ್ದು, ವಿವಿಧ ಸರ್ಕಾರಿ ಯೋಜನೆಗಳು ಹಾಗೂ ಸಹಾಯಧನಗಳನ್ನು ಪಡೆಯಲು ಆಧಾರ್ ಕಾರ್ಡ್ ಸಹಾಯವಾಗುತ್ತದೆ. ಸಾರ್ವಜನಿಕರ ಆಧಾರ್ ಕಾರ್ಡ್‌ಗಳಿಗೆ ಮೊಬೈಲ್ ಸಂಖ್ಯೆ ಲಿಂಕ್ ಅವಶ್ಯಕವಾಗಿದ್ದು, ಆಧಾರ ಕೇಂದ್ರಕ್ಕೆ ಆಗಮಿಸಿ ಮೊಬೈಲ್ ಸಂಖ್ಯೆ ಲಿಂಕ್ ಮಾಡಿಸಬೇಕು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ತಿಳಿಸಿದರು.

ಗದಗ ಜಿಲ್ಲಾಧಿಕಾರಿಗಳ ಕಾರ್ಯಾಲಯದಲ್ಲಿ ಗುರುವಾರ ನಡೆದ ಜಿಲ್ಲಾ ಮಟ್ಟದ ಆಧಾರ್ ಮೇಲ್ವಿಚಾರಣಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಶಾಲೆಗಳಲ್ಲಿ ಆಧಾರ್ ನೋಂದಣಿ ಶಿಬಿರವನ್ನು ಏರ್ಪಡಿಸಿ ಪ್ರತಿಯೊಂದು ಮಗುವು ಆಧಾರ್ ಕಾರ್ಡ್‌ನ್ನು ಹೊಂದುವಂತಾಗಬೇಕು. ಆಧಾರ್ ನೋಂದಣಿಯಾದ ಶಾಲಾ ಮಕ್ಕಳಿಗೆ ಕಡ್ಡಾಯ ಬಯೋಮೆಟ್ರಿಕ್‌ನ್ನು ಮಾಡಿಸುವಂತಾಗಬೇಕು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ತಿಳಿಸಿದರು.

ಸಭೆಯಲ್ಲಿ ಜಿ.ಪಂ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್, ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್.ಎಸ್. ಬುರುಡಿ, ಪದವಿಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಮಸನಾಯಕ, ವಿಕಲಚೇತನರ ಕಲ್ಯಾಣ ಇಲಾಖೆ ಅಧಿಕಾರಿ ಮಹಾಂತೇಶ ಎಂ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕಿ ಪದ್ಮಾವತಿ ಜಿ, ಲೀಡ್ ಬ್ಯಾಂಕ್ ಮ್ಯಾನೇಜರ್ ಸಂತೋಷ, ಅಂಚೆ ಇಲಾಖೆ ಅಧಿಕಾರಿ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

UIDAI ಪ್ರಾದೇಶಿಕ ಕಚೇರಿಯ ಸಹಾಯಕ ಪ್ರಬಂಧಕರಾದ ಮೊಹಮ್ಮದ ಮುಸಾಬ ಮಾತನಾಡಿ, ಜಿಲ್ಲೆಯಲ್ಲಿ 12,35,602 ಆಧಾರ್ ಕಾರ್ಡ್ ಜನರೇಟ್ ಮಾಡಲಾಗಿದೆ. 11,57,749 ಆಧಾರ್ ಕಾರ್ಡ್‌ಗಳಿಗೆ ಮೊಬೈಲ್ ಸಂಖ್ಯೆ ಲಿಂಕ್ ಮಾಡಲಾಗಿದ್ದು, 77,853 ಲಿಂಕ್ ಬಾಕಿ ಇವೆ. ಜಿಲ್ಲೆಯ 1,83,735 ವಿದ್ಯಾರ್ಥಿಗಳ ಪೈಕಿ 1,40,509 ವಿದ್ಯಾರ್ಥಿಗಳ ಆಧಾರ್ ಕಾರ್ಡ್ ಪರಿಶೀಲನೆಗೆ ಕಳುಹಿಸಿದ್ದು, ಆ ಪೈಕಿ 1,01,085 ವಿದ್ಯಾರ್ಥಿಗಳ ಆಧಾರ್ ಕಾರ್ಡ್ ಪೂರ್ಣಗೊಂಡಿವೆ. 82,650 ವಿದ್ಯಾರ್ಥಿಗಳ ಆಧಾರ್ ಕಾರ್ಡ್ ಪರಿಶೀಲನೆ ಬಾಕಿ ಇದೆ ಎಂದು ಸಭೆಗೆ ತಿಳಿಸಿದರು.

## ಗಾಜಾದಲ್ಲಿ ತೀವ್ರಗೊಂಡ ಆಹಾರ ಬಿಕ್ಕಟ್ಟು; ಒಂದೇ ತಿಂಗಳಲ್ಲಿ ಡಜನ್‌ಗಟ್ಟಲೆ ಮಕ್ಕಳನ್ನು ಬಲಿ ಪಡೆದ ಹಸಿವು

■ ವಿಜಯಸಾಕ್ಷಿ ಸುದ್ದಿ, ಗಾಜಾ

ಗಾಜಾ ನಗರದಲ್ಲಿ ಆಹಾರ ಬಿಕ್ಕಟ್ಟು ತೀವ್ರಗೊಂಡಿದ್ದು, ಒಂದೇ ದಿನದಲ್ಲಿ ಆಸ್ಪತ್ರೆಯಲ್ಲಿ ಐವರು ಮಕ್ಕಳು ಹಸಿವಿನಿಂದ ಬಳಲಿ ಸಾವನ್ನಪ್ಪಿದ್ದಾರೆ. ಅವರನ್ನು ಉಳಿಸಲು ವೈದ್ಯರು ಪ್ರಯತ್ನಿಸಿದ ಯಾವುದೇ ಪ್ರಯತ್ನಗಳು ಕೆಲಸ ಮಾಡಲಿಲ್ಲ.

ಇಸ್ರೇಲ್‌ನ ದಿಗ್ಬಂಧನದ ಅಡಿಯಲ್ಲಿರುವ ಗಾಜಾದ ಮಕ್ಕಳನ್ನು ಉಳಿಸಬಹುದಾದ, ಅಪೌಷ್ಟಿಕತೆಗೆ ಚಿಕಿತ್ಸೆ ನೀಡುವ ಮೂಲಭೂತ ಔಷಧಗಳು ಖಾಲಿಯಾಗಿದ್ದವು ಪರ್ಯಾಯ ಚಿಕಿತ್ಸೆ ಸಹ ನಿಷ್ಪರಿಣಾಮಕಾರಿಯಾಗಿದ್ದವು. ಒಂದರ ನಂತರ ಒಂದರಂತೆ, ಶಿಶುಗಳು ಮತ್ತು ಪುಟ್ಟ ಮಕ್ಕಳು ಸಾವನ್ನಪ್ಪುತ್ತಲೇ ಇವೆ.

ಹಸಿವಿನಿಂದ ಬಳಲುತ್ತಿರುವ ಮಕ್ಕಳು, ಉತ್ತರ ಗಾಜಾದಲ್ಲಿ ಅಪೌಷ್ಟಿಕತೆಯಿಂದ ಬಳಲುತ್ತಿರುವ ಮಕ್ಕಳ ಪ್ರಮುಖ ತುರ್ತು ಕೇಂದ್ರವಾದ ಪೇಷಂಟ್ಸ್ ಫ್ರೆಂಡ್ಸ್ ಆಸ್ಪತ್ರೆಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ದಾಖಲಾಗುತ್ತಿದ್ದಾರೆ.

ಕಳೆದ ವಾರಾಂತ್ಯದಲ್ಲಿ ಸಂಭವಿಸಿದ ಸಾವುಗಳು ಹಲವು ಬದಲಾವಣೆಯನ್ನು ಸಹ ಗುರುತಿಸಿವೆ; ಮಕ್ಕಳಲ್ಲಿ ಅಪೌಷ್ಟಿಕತೆ ರೋಗದ ಲಕ್ಷಣಗಳು ಹದಗೆಡುತ್ತಿವೆ, ಅವರು ಅಳಲು ಅಥವಾ ಚಲಿಸಲು ತುಂಬಾ ದುರ್ಬಲರಾಗಿದ್ದಾರೆ ಎಂದು ಪೌಷ್ಟಿಕತಜ್ಞೆ ಡಾ. ರಾಣಾ ಸೊಬೊಹ್ ಹೇಳಿದರು. ಕಳೆದ ತಿಂಗಳುಗಳಲ್ಲಿ, ಆಹಾರ ಪೂರೈಕೆ ಕೊರತೆಯ ಹೊರತಾಗಿಯೂ ಹೆಚ್ಚಿನವರು ಸುಧಾರಿಸಿದ್ದಾರೆ. ಆದರೆ, ಈಗ ರೋಗಿಗಳು ಹೆಚ್ಚು ಕಾಲ ಇರುತ್ತಾರೆ ಮತ್ತು ಚೇತರಿಸಿಕೊಳ್ಳುವುದಿಲ್ಲ ಎಂದು ಅವರು ಹೇಳಿದರು.

### ‘ಶುಚಿ’ ಪೂರೈಕೆ ಬಗ್ಗೆ ಶಿಕ್ಷಣ ಇಲಾಖೆ ಬಳಿಯೇ ಮಾಹಿತಿಯಿಲ್ಲ: ಆಡಳಿತಾಧಿಕಾರಿ ಸಿಡಿಮಿಡಿ

# ತ್ರೈಮಾಸಿಕ ಸಭೆಗೂ ಬಾರದ ಅಧಿಕಾರಿಗಳು

■ ವಿಜಯಸಾಕ್ಷಿ ಸುದ್ದಿ, ರೋಣ

ಸರಕಾರ ಶಾಲಾ ವಿದ್ಯಾರ್ಥಿನಿಯರಿಗೆ ‘ಶುಚಿ’ ಸ್ಯಾನಿಟರಿ ಪ್ಯಾಡ್‌ಗಳನ್ನು ಪೂರೈಕೆ ಮಾಡುತ್ತಿದೆ. ಈ ಯೋಜನೆಯ ಲಾಭ ಹೆಣ್ಣುಮಕ್ಕಳಿಗೆ ತಲುಪುತ್ತಿದೆಯಾ ಎಂದು ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೇ ಸಮರ್ಪಕ ಮಾಹಿತಿಯಿಲ್ಲ ಎಂದು ತಾ.ಪಂ ಆಡಳಿತಾಧಿಕಾರಿ ಡಾ. ನಂದಾ ಹನಮರೆಟ್ಟಿ ಅಸಮಾಧಾನ ವ್ಯಕ್ತಪಡಿಸಿದರು. ಶುಕ್ರವಾರ ತಾ.ಪಂ ಆಡಳಿತಾಧಿಕಾರಿ ಡಾ. ನಂದಾ ಹನಮನರೆಟ್ಟಿರವರ ಅಧ್ಯಕ್ಷತೆಯಲ್ಲಿ ಜರುಗಿದ ಸಾಮಾನ್ಯ ಸಭೆಯಲ್ಲಿ ಈ ಕುರಿತು ಡಾ. ಬಿ.ಎಸ್.ಭಜಂತ್ರಿಯುವರನ್ನು ಪ್ರಶ್ನಿಸಿದಾಗ, ಈಗ ಆರೋಗ್ಯ ಇಲಾಖೆಯಿಂದ ಸರಬರಾಜು



ಆಗುತ್ತಿಲ್ಲ. ಬದಲಾಗಿ ಶಾಲೆಗಳಿಗೆ ನೇರವಾಗಿ ಹೋಗುತ್ತಿವೆ ಎಂದರು. ಆಗ ಆಡಳಿತಾಧಿಕಾರಿಗಳು ಶಿಕ್ಷಣ ಇಲಾಖೆಯ ಬಿಆರ್‌ಸಿ ಫಣಿಬಂದರನ್ನು ಪ್ರಶ್ನಿಸಿದರೆ ಅವರ ಬಳಿ ಮಾಹಿತಿ ಇಲ್ಲದಿರುವುದನ್ನು ಕಂಡು ಅಸಮಾಧಾನಗೊಂಡರು.

ಹೆಣ್ಣು ಮಕ್ಕಳ ಆರೋಗ್ಯದ ದೃಷ್ಟಿಯಿಂದ ‘ಶುಚಿ’ ಉತ್ತಮ ಯೋಜನೆಯಾಗಿದ್ದು, ನಿಮ್ಮ ಬಳಿಯೇ ಮಾಹಿತಿಯಿಲ್ಲ ಅಂದರೆ ಸರಿಯಲ್ಲ. ಮುಖ್ಯ ಶಿಕ್ಷಕರಿಂದ ಅಗತ್ಯ ಮಾಹಿತಿ ಪಡೆದುಕೊಂಡು ನಮಗೆ ವಿವರಿಸಿ ಎಂದು ಸೂಚಿಸಿದರು.

ಅಬಕಾರಿ ಇಲಾಖೆಯ ನಿರೀಕ್ಷಕರು ಸಭೆಗೆ ಬಾರದೆ ತಮ್ಮ ಸಿಬ್ಬಂದಿಯನ್ನು ಸಾಮಾನ್ಯ ಸಭೆಗೆ ಕಳುಹಿಸಿದ್ದರು. ಸಿಬ್ಬಂದಿ ವಿರುದ್ಧ ಸಿಟ್ಟಾದ ಆಡಳಿತಾಧಿಕಾರಿಗಳು, ಮೂರು ತಿಂಗಳಿಗೊಮ್ಮೆ ನಡೆಯುವ ಸಭೆಗೆ ಬರಲಿಲ್ಲ ಅಂದರೆ ಏನರ್ಥ, ನೀವು ವರದಿ ಒಪ್ಪಿಸುವುದು ಬೇಡ ಎಂದು ಸಿಬ್ಬಂದಿಯನ್ನು ಹೊರಗೆ ಕಳುಹಿಸಿ, ಅಬಕಾರಿ ನಿರೀಕ್ಷಕರಿಗೆ ನೋಟಿಸ್ ಜಾರಿ ಮಾಡುವಂತೆ ತಾ.ಪಂ ಇಒ ಚಂದ್ರಶೇಖರ ಕಂದಕೂರರಿಗೆ ಸೂಚಿಸಿದರು.

ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯಲ್ಲಿ ಅಂಗನವಾಡಿ ಕೇಂದ್ರಗಳ ಕಟ್ಟಡಗಳ ಸಮಸ್ಯೆ ಬಿಟ್ಟರೆ ಮತ್ತೇನೂ ಇಲ್ಲ ಎಂದು ಸಿಡಿಪಿಒ ಶಿವಗಂಗಮ್ಮ ಸಭೆಗೆ ವಿವರಿಸಿದರು. ಆಗ ಆಡಳಿತಾಧಿಕಾರಿಗಳು ಯಾವ ಗ್ರಾಮ, ಎಂತಹ ಸಮಸ್ಯೆ, ಎಷ್ಟು ಕೇಂದ್ರಗಳು ಎನ್ನುವ ನಿಖರವಾದ ಮಾಹಿತಿ ನಿಡಬೇಕು. ಅಂದಾಗ ಸಮಸ್ಯೆಗಳನ್ನು ಬಗೆಹರಿಸಲು ಸಾಧ್ಯವಾಗುತ್ತದೆ. ಶನಿವಾರ ನನಗೆ ಅಗತ್ಯ ಮತ್ತು ಪರಿಪೂರ್ಣ ಮಾಹಿತಿಯನ್ನು ಒದಗಿಸಿ ಎಂದರು.

ನಂತರ ಅವರು ವಿವಿಧ ಇಲಾಖೆಗಳ ಪ್ರಗತಿಯನ್ನು ಪರಿಶೀಲಿಸಿದರು. ತಾ.ಪಂ ಇಒ ಚಂದ್ರಶೇಖರ ಕಂದಕೂರ, ಯೋಜನಾ ನಿರ್ದೇಶಕ ಸಿ.ಎಸ್. ನಿಲಗುಂದ ಉಪಸ್ಥಿತರಿದ್ದರು.

> ಮುಖ್ಯ ಇಲಾಖೆಗಳ ಅಧಿಕಾರಿಗಳು ಸಭೆಗೆ ಗೈರಾಗಿದ್ದರು. ದೂರವಾಣಿ ಕರೆ ಮಾಡಿ ಸಭೆಗೆ ಆಹ್ವಾನಿಸಿದರೂ ಸಹ ಬಹುತೇಕ ಅಧಿಕಾರಿಗಳು ಸಾಮಾನ್ಯ ಸಭೆಗೆ ಆಗಮಿಸಲಿಲ್ಲ. ಅಂತವರ ವಿರುದ್ಧ ನೋಟಿಸ್ ಜಾರಿ ಮಾಡಿ, ಜಿಲ್ಲಾಧಿಕಾರಿ, ಜಿಲ್ಲಾ ಮುಖ್ಯಕಾರ್ಯನಿರ್ವಾಹಕ ಅಧಿಕಾರಿಗಳ ಗಮನಕ್ಕೆ ತರುವ ಮೂಲಕ ಗೈರಾದ ಅಧಿಕಾರಿಗಳ ವಿರುದ್ಧ ಸೂಕ್ತ ಕ್ರಮ ತೆಗೆದುಕೊಳ್ಳಲು ತಿಳಿಸುತ್ತೇನೆ ಎಂದು ಆಡಳಿತಾಧಿಕಾರಿ ಡಾ. ನಂದಾ ಹನಮನರೆಟ್ಟಿ ಹೇಳಿದರು.

## ಮುಪ್ಪಿನಲ್ಲಿ ಹಿರಿಯರಿಗೆ ಹೆಗಲಾಗಿ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಬದುಕಿನಲ್ಲಿ ಎದುರಾಗುವ ಕಷ್ಟ-ನಷ್ಟಗಳನ್ನು ಅನುಭವಿಸಿ ತಂದೆ-ತಾಯಿ ನಮ್ಮನ್ನ ಬೆಳೆಸಿರುತ್ತಾರೆ. ಅವರ ಮುಪ್ಪಿನ ಕಾಲದಲ್ಲಿ ಮಕ್ಕಳಾದವರು ಅವರನ್ನು ಚೆನ್ನಾಗಿ ನೋಡಿಕೊಳ್ಳಬೇಕು ಎಂದು ತಾಲೂಕು ಪಂಚ ಗ್ಯಾರಂಟಿ ಸಮಿತಿ ಅಧ್ಯಕ್ಷ ನಾಗರಾಜ ಮಡಿವಾಳರ ಹೇಳಿದರು.

ಇಲ್ಲಿನ ಬಾಳಿಕಾಯಿ ಅವರ ಜಿನ್ನಿಂಗ್ ಮಿಲ್‌ನಲ್ಲಿ ಶುಕ್ರವಾರ ಕರ್ನಾಟಕ ರಾಜ್ಯ ಹಿರಿಯ ನಾಗರಿಕರು ಹಾಗೂ ನಿವೃತ್ತ ನೌಕರರ ಕ್ಷೇಮಾಭಿವೃದ್ಧಿ ಸಂಘ ಲಕ್ಷ್ಮೇಶ್ವರ ಘಟಕದ ವತಿಯಿಂದ ಜರುಗಿದ ಮಾಸಿಕ ಸಭೆಯಲ್ಲಿ ಹಿರಿಯ ನಾಗರಿಕರ ಜನ್ಮ ದಿನಾಚರಣೆ ಕಾರ್ಯಕ್ರಮ ಉದ್ದೇಶಿಸಿ ಅವರು ಮಾತನಾಡಿದರು.

ಪಂಚ ಗ್ಯಾರಂಟಿ ಯೋಜನೆಗಳಿಂದ ರಾಜ್ಯದ ಬಡ ಜನರಿಗೆ ಸಾಕಷ್ಟು ಅನುಕೂಲಗಳಾಗಿವೆ. ಇದುವರೆಗೂ ಯೋಜನೆಯಡಿ ಯಾವುದೇ ಸೌಲಭ್ಯ ಪಡೆಯದವರನ್ನು ಸಂಪರ್ಕಿಸಿ ಅವರ ಸಮಸ್ಯೆಯನ್ನು ಬಗೆಹರಿಸಿ ಅವರಿಗೂ ಯೋಜನೆಯ ಲಾಭ ಬರುವಂತೆ ಮಾಡುತ್ತೇನೆ ಎಂದು ತಿಳಿಸಿದರು. ಚಂಬಣ್ಣ ಬಾಳಿಕಾಯಿ ಮಾತನಾಡಿ, ಹಿರಿಯ ನಾಗರಿಕರ ಸಂಘ ತನ್ನ ಸದಸ್ಯರಿಗೆ ಅನುಕೂಲ ಆಗುವ ರೀತಿಯಲ್ಲಿ ಉತ್ತಮ ಕೆಲಸ ಮಾಡುತ್ತಿದೆ. ಕೇಂದ್ರ ಮತ್ತು ರಾಜ್ಯ ಸರ್ಕಾರಗಳಿಂದ ಸಿಗುವ ಎಲ್ಲ ಸೌಲಭ್ಯಗಳನ್ನು ಎಲ್ಲ ಹಿರಿಯ ನಾರಿಕರಿಗೆ ಒದಗಿಸಿಕೊಡಬೇಕಾಗಿರುವುದ ಸಂಘದ ಜವಾಬ್ದಾರಿ ಎಂದರು.

ಇನ್ನರ್‌ವ್ಹೀಲ್ ಕ್ಲಬ್‌ನ ಅಧ್ಯಕ್ಷೆ ಮಾಲಾದೇವಿ ದಂಧರಗಿ ಮಾತನಾಡಿ, ಹಿರಿಯ ನಾಗರಿಕನ್ನು ಗೌರವದಿಂದ ನಡೆಸಿಕೊಳ್ಳಬೇಕು. ಅವರ ಜೀವನಾನುಭವ ನಮಗೆಲ್ಲ ಮಾರ್ಗದರ್ಶಿ. ಹಿರಿಯರು ಹಾಕಿಕೊಟ್ಟ ಸನ್ಮಾರ್ಗದಲ್ಲಿ ನಡೆಯೋಣ ಎಂದು ತಿಳಿಸಿದರು. ಅಧ್ಯಕ್ಷತೆ ವಹಿಸಿದ್ದ ಸಂಘದ ಅಧ್ಯಕ್ಷ ಸಿ.ಆರ್. ಲಕ್ಕುಂಡಿಮಠ ಮಾತನಾಡಿ, ಸಂಘದ ಎಲ್ಲ ಸದಸ್ಯರಿಗೆ ಸರ್ಕಾರದಿಂದ ಸಿಗುವ ಸೌಲಭ್ಯಗಳನ್ನು ಒದಗಿಸಿಕೊಡಲು ಪ್ರಾಮಾಣಿಕ ಪ್ರಯತ್ನ ಮಾಡುತ್ತೇವೆ. ಇನ್ನೂ ಹೆಚ್ಚಿನ ಸಂಖ್ಯೆಯಲ್ಲಿ ಹಿರಿಯರು ಕಾರ್ಯಕ್ರಮಕ್ಕೆ ಬಂದು ಅದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಹೇಳಿದರು.

ಎಸ್.ಪಿ. ಪಾಟೀಲ, ಚನ್ನಪ್ಪ ಕೋಲಕಾರ, ನೀಲಪ್ಪ ಕರ್ಜೆಕಣ್ಣವರ ಮಾತನಾಡಿದರು. ಹೇಮಗಿರಿಮಠ, ಸಿ.ಎಸ್. ಮಡಿವಾಳರ, ಎಸ್.ಸಿ. ಅಳಗವಾಡಿ, ಸಿಕಂದರ್‌ಸಾಬ್ ಮಂಜಲಾಪುರ ಸೇರಿದಂತೆ ಸಂಘದ ಸದಸ್ಯರು ಇದ್ದರು.

### ಅಲೆಮಾರಿ/ಅರೆ ಅಲೆಮಾರಿ ಜನಾಂಗವರ ಸಲಹಾ ಸಮಿತಿ ಪ್ರಗತಿ ಪರಿಶೀಲನಾ ಸಭೆಯಲ್ಲಿ ಡಿಸಿ ಕರೆ

# ಸರ್ಕಾರಿ ಸೌಲಭ್ಯಗಳು ಅರ್ಹರಿಗೆ ತಲುಪಲಿ

■ ವಿಜಯಸಾಕ್ಷಿ ಸುದ್ದಿ, ಗದಗ

ಸರ್ಕಾರದಿಂದ ಅಲೆಮಾರಿ, ಅರೆ ಅಲೆಮಾರಿ ಜನಾಂಗದವರಿಗೆ ವಿವಿಧ ಯೋಜನೆಗಳು ಜಾ-ರಿಯಾಗಿದ್ದು, ಅವುಗಳ ಸೌಲಭ್ಯ ಅರ್ಹರಿಗೆ ಸಮರ್ಪಕ ರೀತಿಯಲ್ಲಿ ದೊರಕುವಂತಾಗಬೇಕು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ತಿಳಿಸಿದರು.



ಗದಗ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶುಕ್ರವಾರ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಅಲೆಮಾರಿ/ಅರೆ ಅಲೆಮಾರಿ ಜನಾಂಗದವರ ಸಲಹಾ ಸಮಿತಿ/ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಅಲೆಮಾರಿ/ಅರೆ ಅಲೆಮಾರಿ ಜನಾಂಗದವರಿಗೆ ಶಿಕ್ಷಣ, ಹಾಸ್ಟೆಲ್ ಸೌಲಭ್ಯ, ವಸತಿ ಸೌಲಭ್ಯ ದೊರಕಿಸುವ ನಿಟ್ಟಿನಲ್ಲಿ ಅಧಿಕಾರಿಗಳು ಕ್ರಮ ವಹಿಸಬೇಕು. ಯಾವ ಪ್ರದೇಶಗಳಲ್ಲಿ ಇನ್ನೂ ಆರೋಗ್ಯ ತಪಾಸಣೆ ಆಗಿಲ್ಲವೋ ಅಂತಹ ಪ್ರದೇಶಗಳ ಸಮೀಕ್ಷೆ ನಡೆಸಿ ಆರೋಗ್ಯ ತಪಾಸಣೆ ಕೈಗೊಳ್ಳಬೇಕು. ಒಟ್ಟಾರೆಯಾಗಿ ಸರ್ಕಾರದ ಸವಲತ್ತುಗಳನ್ನು ಅಲೆಮಾರಿ/ಅರೆ ಅಲೆಮಾರಿ ಜನಾಂಗದವರಿಗೆ ಒದಗಿಸಿ ಅವರು ಸಮಾಜದ ಮುಖ್ಯ ವಾಹಿನಿಗೆ ಬರಲು ಕ್ರಮ ವಹಿಸಬೇಕು ಎಂದರು.

ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಧಿಕಾರಿ ಮಹಬೂಬ ತುಂಬರಮಟ್ಟಿ ಮಾತನಾಡಿ, ಅಲೆಮಾರಿ/ಅರೆ ಅಲೆಮಾರಿ ಜನಾಂಗಕ್ಕೆ ಸೇರಿದ 1ರಿಂದ 10ನೇ ತರಗತಿಯವರೆಗೆ ಮೆಟ್ರಿಕ್ ಪೂರ್ವ ವಿದ್ಯಾರ್ಥಿಗಳಿಗೆ ಮಾಹೆಯಾನ 200 ರೂ. ಶಿಷ್ಯವೇತನ ನೀಡಲಾಗುತ್ತಿದೆ. 2024-25ನೇ ಸಾಲಿನಲ್ಲಿ ಜಿಲ್ಲೆಯ 340 ಮೆಟ್ರಿಕ್ ಪೂರ್ವ ವಿದ್ಯಾರ್ಥಿಗಳಿಗೆ 8,80,000 ರೂ ವಿದ್ಯಾರ್ಥಿ ವೇತನ ಮಂಜೂರು ಮಾಡಿದೆ. ಮೆಟ್ರಿಕ್ ನಂತರದ 151 ವಿದ್ಯಾರ್ಥಿಗಳಿಗೆ 12,73,000 ರೂ. ವಿದ್ಯಾರ್ಥಿ ವೇತನ ಮಂಜೂರು ಮಾಡಿದೆ. ಅಲೆಮಾರಿ/ಅರೆ ಅಲೆಮಾರಿ ವಸತಿ ಯೋಜನೆಯಡಿ 2022-23ನೇ ಸಾಲಿಗೆ ಗದಗ ಜಿಲ್ಲೆಗೆ 71 ಮನೆಗಳನ್ನು ನಿಗದಿಪಡಿಸಲಾಗಿದೆ ಎಂದರು. ಕೆಂಚಪ್ಪ ಹೆಳವರ, ವಿಠಲ ಗಣಾಚಾರಿ, ರಾಜೇಂದ್ರ ಬೈಲಪತ್ತಾರ, ಮಣಿಕಂಠ ಶ್ರೀನಿವಾಸ, ಎಂ.ಎಚ್. ಮಕಾನದಾರ ಹಾಗೂ ಜಿಲ್ಲಾ ಸಲಹಾ ಸಮಿತಿ ಸದಸ್ಯ ಹರೀಶ ಪೂಜಾರ್ ಅವರುಗಳು ಸಭೆಯಲ್ಲಿ ಸಲಹೆ-ಸೂಚನೆಗಳನ್ನು ನೀಡಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯಿತಿ ಮುಖ್ಯ ಯೋಜನಾಧಿಕಾರಿ ನಿರ್ಮಲಾ, ಯೋಜನಾ ನಿರ್ದೇಶಕರಾದ ಚಳಗೇರಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿ ಡಾ. ಎಸ್.ಎಸ್. ನೀಲಗುಂದ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕಿ ಪದ್ಮಾವತಿ ಜಿ, ವಿವಿಧ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿಗಳು ಹಾಜರಿದ್ದರು.

> 2025-26ನೇ ಸಾಲಿನಲ್ಲಿ ಅಲೆಮಾರಿ/ಅರೆ ಅಲೆಮಾರಿ ಜನಾಂಗದವರ ಕಾಲೋನಿಗಳಿಗೆ ಮೂಲಭೂತ ಸೌಕರ್ಯಗಳಾದ ಸಿಸಿ ರಸ್ತೆ, ಹೈಮಾಸ್ಟ್ ಬೀದಿದೀಪ ನಿರ್ಮಾಣ ಕುರಿತ ವಿವರಗಳ ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆ ಎಂದು ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಧಿಕಾರಿ ಮಹಬೂಬ ತುಂಬರಮಟ್ಟಿ ಸಭೆಗೆ ಮಾಹಿತಿ ನೀಡಿದರು.

## ‘ಮಿಲಾನ್’ನಿಂದ ಸಾಮಾಜಿಕ ಬದಲಾವಣೆಯ ಕಾಳಜಿ




■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕದಲ್ಲಿ ‘ಮಿಲಾನ್’ ಸಂಸ್ಥೆಯು ಸುಮಾರು 1500ಕ್ಕೂ ಹೆಚ್ಚು ಬಾಲಕಿಯರನ್ನು ‘ಗರ್ಲ್ ಐಕಾನ್’ ಮತ್ತು ‘ಗರ್ಲ್ ಐಕಾನ್ ಸ್ವಯಂಸೇವಕ’ರನ್ನು ಹೊಂದಿದೆ. ಸಾಮಾಜಿಕ ಬದಲಾವಣೆ ತರುವ ನಿಟ್ಟಿನಲ್ಲಿ ಕಾಳಜಿ ವಹಿಸಿ ಕೆಲಸ ಮಾಡುವುದು ಮಿಲಾನ್ ಸಂಸ್ಥೆಯ ಉದ್ದೇಶವಾಗಿದೆ ಎಂದು ಪ್ರೋಗ್ರಾಂ ಕೋಆರ್ಡಿನೇಟರ್ ಪೂಜಾ ಗಡಗಿ ಹೇಳಿದರು.

ನಗರದ ಪತ್ರಿಕಾ ಭವನದಲ್ಲಿ ಶುಕ್ರವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮಿಲಾನ್ ಸಂಸ್ಥೆಯು ಕಳೆದ ಏಳು ವರ್ಷಗಳಿಂದ 14ರಿಂದ 18 ವಯೋಮಿತಿಯ ಬಾಲಕಿಯರನ್ನು ‘ಗರ್ಲ್ ಐಕಾನ್’ ಎಂದು ಗುರುತಿಸಿ ಅವರಿಗೆ ನಾಯಕತ್ವದ ತರಬೇತಿ ನೀಡುತ್ತಿದೆ. ಪ್ರತಿಯೊಬ್ಬ ಗರ್ಲ್ ಐಕಾನ್ 20 ಜನ ಸಮನವಯಸ್ಕ ಬಾಲಕಿಯರ ಅವರದೇ ಸಮುದಾಯದ ಹೆಣ್ಣು ಮಕ್ಕಳ ಸಮಸ್ಯೆಗಳಿಗೆ ಅವರಿಂದಲೇ ಪರಿಹಾರಗಳನ್ನು ಕಂಡುಕೊಳ್ಳಲು ಗುಂಪನ್ನು ಕಟ್ಟಿಕೊಂಡು ಸಮುದಾಯದಲ್ಲಿ ತೊಡಗಿಸಿಕೊಂಡು ತಾವು ಪಡೆದ ತರಬೇತಿಯನ್ನು ಇತರರಿಗೂ ತಲುಪಿಸುತ್ತಾರೆ ಎಂದರು.

ಈ ಗುಂಪುಗಳ ಮೂಲ ಉದ್ದೇಶವು ಸಮಾಜದಲ್ಲಿ ಕಂಡುಬರುವ ಸಾಮಾಜಿಕ ಪಿಡುಗುಗಳಾದ ಬಾಲ್ಯ ವಿವಾಹ, ಬಾಲ ಕಾರ್ಮಿಕತೆ, ಹೆಣ್ಣು ಭ್ರೂಣ ಹತ್ಯೆ, ಶಾಲೆ ಬಿಟ್ಟ ಮಕ್ಕಳನ್ನು ಶಾಲೆಗೆ ಸೇರಿಸುವುದು, ಜಾತಿಭೇದ, ವರದಕ್ಷಿಣೆ, ಮಕ್ಕಳ ಮೇಲಾಗುವ ದೌರ್ಜನ್ಯಗಳ ವಿರುದ್ಧ ಧ್ವನಿ ಎತ್ತುವುದಾಗಿದೆ. ಬಾಲಕಿಯರು ಹಾಗೂ ಪೋಷಕರು ಅರ್ಥ ಮಾಡಿಕೊಂಡು ಅದರ ಸದುಪಯೋಗ ಪಡೆದುಕೊಳ್ಳುವಂತಾಗಲಿ ಎಂದರು.

ಪತ್ರಿಕಾಗೋಷ್ಠಿಯಲ್ಲಿ ಸಹಾಯಕ ಪ್ರೋಗ್ರಾಂ ಕೋಆರ್ಡಿನೇಟರ್ ರೂಪಾ ಮರಿಗೌಡ್ರ, ಎಂಇಎಲ್ ಕೋಆರ್ಡಿನೇಟರ್ ಸಿಮ್ರಿನ್ ಉದಗಟ್ಟಿ, ಪ್ರೊಜೆಕ್ಟ್ ಅಸ್ಸಿಸೆಂಟ್ ಪಾರ್ವತಿ ಬೆಳಗಲಿ, ಸಂಜನಾ ಭಜಂತ್ರಿ, ತೇಜಸ್ವಿನಿ ಮಡಿವಾಳರ ಇದ್ದರು.

## ಕೇರಳ: 2011ರ ಅತ್ಯಾಚಾರ-ಕೊಲೆ ಅಪರಾಧಿ ಕಣ್ಣೂರು ಕೇಂದ್ರ ಕಾರಾಗೃಹದಿಂದ ಪರಾರಿ

■ ವಿಜಯಸಾಕ್ಷಿ ಸುದ್ದಿ, ಕಣ್ಣೂರು

ಕೇರಳದ ಕಣ್ಣೂರು ಕೇಂದ್ರ ಕಾರಾಗೃಹದ ಬಿಗಿ ಭದ್ರತಾ ಕೊಠಡಿಯಿಂದ 2011ರ ಅತ್ಯಾಚಾರ ಮತ್ತು ಕೊಲೆ ಪ್ರಕರಣದ ಜೀವಾವಧಿ ಶಿಕ್ಷೆಗೆ ಒಳಗಾದ ಗೋವಿಂದಚಾಮಿ ಇಂದು (ಜು.25) ಬೆಳಿಗ್ಗೆ ಪರಾರಿಯಾಗಿದ್ದಾನೆ. ತಮಿಳುನಾಡಿನ ವಿರುದುನಗರ ಮೂಲದ ಈ ಕೈದಿ, ಕಾರಾಗೃಹ ಅಧಿಕಾರಿಗಳ ನಿಯಮಿತ ಪರಿಶೀಲನೆಯ ವೇಳೆ ಕಾಣೆಯಾಗಿರುವುದು ಕಂಡುಬಂದಿದೆ. ಪೊಲೀಸರ ಪ್ರಕಾರ, ಸಿಸಿಟಿವಿ ದೃಶ್ಯಾವಳಿಗಳಲ್ಲಿ ಗೋವಿಂದಚಾಮಿ ನಸುಕಿನ 1 ಗಂಟೆ ಸುಮಾರಿಗೆ ಕಾರಾಗೃಹದ ಬೇಲಿಯಿರುವ ಗೋಡೆಯನ್ನು ಹಾರಿ ತಪ್ಪಿಸಿಕೊಂಡಿರುವುದು ಬಹಿರಂಗವಾಗಿದೆ. ಆದರೆ, ಕಾರಾಗೃಹದ ಅಧಿಕಾರಿಗಳಿಗೆ ಆತನ ಅನುಪಸ್ಥಿತಿಯು ಬೆಳಗಿನ ಜಾವದಲ್ಲಿ ಮಾತ್ರ ತಿಳಿದುಬಂದಿದೆ.

ಗೋವಿಂದಚಾಮಿ 2011ರಲ್ಲಿ ತ್ರಿಶೂರ್ ಬಳಿ ಚಲಿಸುತ್ತಿದ್ದ ರೈಲಿನಿಂದ 23 ವರ್ಷದ ಯುವತಿಯನ್ನು ತಳ್ಳಿ, ಆಕೆಯ ಮೇಲೆ ಅತ್ಯಾಚಾರ ಮತ್ತು ಕೊಲೆ ಮಾಡಿದ ಆರೋಪದಲ್ಲಿ ಜೀವಾವಧಿ ಶಿಕ್ಷೆ ಅನುಭವಿಸುತ್ತಿದ್ದನು.



## ಕರಕುಶಲ ತರಬೇತಿ ಸಾಮಗ್ರಿಗಳ ಪೂರೈಕೆ




■ ವಿಜಯಸಾಕ್ಷಿ ಸುದ್ದಿ, ಗದಗ

ಮಹಿಳಾ ಸಬಲೀಕರಣವು ಸಾಕ್ಷರತೆ, ಶಿಕ್ಷಣ, ತರಬೇತಿ ಮತ್ತು ಜಾಗೃತಿ ಮೂಡಿಸುವ ಮೂಲಕ ಮಹಿಳೆಯರ ಸ್ಥಾನಮಾನವನ್ನು ಹೆಚ್ಚಿಸಲು ಸಹಾಯ ಮಾಡುತ್ತದೆ. ಈ ನಿಟ್ಟಿನಲ್ಲಿ ಇನ್ನರ್‌ವೀಲ್ ಕ್ಲಬ್ ಗದಗ-ಬೆಟಗೇರಿ ಮಹಿಳೆಯರ ಪರವಾಗಿ ಅನೇಕ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ. ಈ ಕಾರ್ಯಕ್ರಮದ ಅಂಗವಾಗಿ ಸರ್ಕಾರಿ ಐ.ಟಿ.ಐ ಕಾಲೇಜಿನಲ್ಲಿ ತರಬೇತಿ ಪಡೆಯುತ್ತಿರುವ ಮಹಿಳಾ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಿಸಲೆಂದು ಆರಿ ವರ್ಕ್ ಸಾಮಗ್ರಿಗಳನ್ನು ಒದಗಿಸಿದರು.

ಕಾರ್ಯಕ್ರಮದಲ್ಲಿ ಕಾಲೇಜಿನ ಪ್ರಾಂಶುಪಾಲರಾದ ಡಾ. ಬಸವರಾಜ್ ಮಲ್ಲೂರ ಮಾತನಾಡಿ, ಮಹಿಳೆಯರು ತಮ್ಮ ಸದೃಢ ಭವಿಷ್ಯವನ್ನು ರೂಪಿಸಿಕೊಳ್ಳಲು ತಮ್ಮ ಕಾಲೇಜಿನಲ್ಲಿ ನೀಡುತ್ತಿರುವ ತರಬೇತಿಗಳ ಬಗ್ಗೆ ವಿವರಿಸಿದರು. ಇನ್ನರ್‌ವೀಲ್ ಕ್ಲಬ್‌ನ ಅಧ್ಯಕ್ಷೆ ಅಶ್ವಿನಿ ಜಗತಾಪ ಮಾತನಾಡಿ, ಪಡೆದ ತರಬೇತಿಯ ಸದುಪಯೋಗ ಪಡೆದುಕೊಂಡು ಸ್ವಾವಲಂಬಿ ಜೀವನವನ್ನು ರೂಪಿಸಿಕೊಳ್ಳಬೇಕು ಎಂದರು.


ಕಾಲೇಜಿನ ಸುನೀತಾ ಬುರುಡಿ ಸೇರಿದಂತೆ ಉಪನ್ಯಾಸಕರು, ಸಿಬ್ಬಂದಿ ವರ್ಗದವರು, ಇನ್ನರ್‌ವೀಲ್ ಕ್ಲಬ್ ಕಾರ್ಯದರ್ಶಿ ಶಿವಲೀಲಾ ಅಕ್ಕಿ, ಕೋಶಾಧ್ಯಕ್ಷರಾದ ಪುಷ್ಪಾ ಭಂಡಾರಿ, ಸಂಪಾದಕರಾದ ವೀಣಾ ಕಾವೇರಿ, ಸಿಪಿಸಿಸಿ ಮೀನಾಕ್ಷಿ ಕೊರವಣ್ಣವರ್ ಉಪಸ್ಥಿತರಿದ್ದರು.

# ವಿವಿಧೆಡೆ ಕೋಟ್ಪಾ ದಾಳಿ, ದಂಡ

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾ ಸಮೀಕ್ಷಣಾಧಿಕಾರಿ ಡಾ. ವೆಂಕಟೇಶ ರಾಥೋಡ್ ಮಾರ್ಗದರ್ಶನದಲ್ಲಿ ಜಿಲ್ಲೆಯ ಬೆಟಗೇರಿ ಭಾಗದಲ್ಲಿ, ರೋಣ ಪಟ್ಟಣದ ವಿವಿಧೆಡೆ ಕೋಟ್ಪಾ ದಾಳಿ ಹಮ್ಮಿಕೊಂಡು ತಂಬಾಕು ನಿಯಂತ್ರಣ ಕೋಟ್ಪಾ ಕಾಯ್ದೆ-2003 ಉಲ್ಲಂಘನೆಯ ಕುರಿತು ಜಾಗೃತಿ ಮೂಡಿಸಿ, ಎಚ್ಚರಿಕೆ ನೀಡಿ 49 ಪ್ರಕರಣಗಳನ್ನು ದಾಖಲಿಸಿ, ರೂ. 13,900 ದಂಡ ಸಂಗ್ರಹಿಸಲಾಯಿತು.

ಜಿಲ್ಲೆಯ ಕೆಲವು ಪಾನ್ ಬೀಡಾ ಅಂಗಡಿ, ಹೋಟೆಲ್, ಬಾರ್‌ಗಳಲ್ಲಿ ಅನಧಿಕೃತ ಧೂಮಪಾನ ಅಡ್ಡೆಗಳನ್ನು ಮಾಡಿಕೊಂಡು ಸಾರ್ವಜನಿಕರ ಜೀವದೊಂದಿಗೆ ಚೆಲ್ಲಾಟವಾಡುತ್ತಿದ್ದು,



ಈ ರೀತಿಯ ಸಾರ್ವಜನಿಕ ಸ್ಥಳಗಳಲ್ಲಿ ಧೂಮಪಾನ ಮಾಡುವದರಿಂದ ಅವರು ಸೇವಿಸಿ ಬಿಟ್ಟ ಹೊಗೆಯಿಂದ ಅಮಾಯಕರು ಕೂಡ ಅಪಾಯಕಾರಿ ಕ್ಯಾನ್ಸರ್, ಹೃದಯ ಸಂಬಂಧಿ ಕಾಯಿಲೆ, ಪಾರ್ಶ್ವವಾಯು, ಇತರ ಮಾರಣಾಂತಿಕ ಕಾಯಿಲೆಗಳಿಗೆ ಬಲಿಯಾಗುತ್ತಾರೆ ಎಂದು ಡಾ. ವೆಂಕಟೇಶ ರಾಥೋಡ್ ಅರಿವು ಮೂಡಿಸಿದರು.

ರಾಜ್ಯ ಸರ್ಕಾರ ಮೇ 31, 2025ರಂದು ಮಹತ್ತರದ ನಿರ್ಣಯ ಕೈಗೊಂಡು, ಕೋಟ್ಪಾ ಕಾಯ್ದೆಯಲ್ಲಿ ತಿದ್ದುಪಡಿ ಮಾಡಿದ್ದು, ಈ ಮೊದಲು ಸೆಕ್ಷನ್ 4 ಸಾರ್ವಜನಿಕ ಸ್ಥಳಗಳಲ್ಲಿ ಧೂಮಪಾನ ಮಾಡಿದರೆ ರೂ.200ವರೆಗೆ ದಂಡವಿರುವದನ್ನು, ಈಗ ದಂಡದ ಮೊತ್ತವನ್ನು ರೂ.1000ಗೆ ಏರಿಸಲಾಗಿದೆ. ಸೆಕ್ಷನ್ 6ಎ ಶಾಲಾ ಕಾಳೇಜುಗಳ ಸುತ್ತ 100 ಗಜದವರೆಗೆ ತಂಬಾಕು ಉತ್ಪನ್ನಗಳ ನಿಷೇಧ ಹಾಗೂ ಸೆಕ್ಷನ್ 6ಬಿ 18 ವರ್ಷದೊಳಗಿನ ಬದಲಿಗೆ 21 ವರ್ಷದೊಳಗಿನವರಿಗೆ ತಂಬಾಕು ಉತ್ಪನ್ನ ನಿಷೇಧಿಸಲಾಗಿದ್ದು, ಈ ಸೆಕ್ಷನ್ ಅಡಿ ದಂಡದ ಮೊತ್ತವನ್ನು ರೂ.200ರಿಂದ ರೂ.1000ವರೆಗೆ ಹೆಚ್ಚಿಸಲಾಗಿದೆ.

ಶಾಲಾ-ಕಾಲೇಜುಗಳ ಸುತ್ತಲಿನ ತಂಬಾಕು ಮಾರಾಟಗಾರರು ಮಾರಾಟ ನಿಲ್ಲಿಸದಿದ್ದಲ್ಲಿ ಕಾನೂನು ರೀತ್ಯಾ ಕಠಿಣ ಕ್ರಮ ಕೈಗೊಳ್ಳಲಾಗುವದೆಂದು ಜಿಲ್ಲಾ ಸಮೀಕ್ಷಣಾಧಿಕಾರಿಗಳು ತಿಳಿಸಿದರು.

ಕರ್ನಾಟಕ ಸರಕಾರ
**ಮಹಾತ್ಮ ಗಾಂಧಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ, ಕೌಶ್ಯಲ್ಯ ವಿಕಾಸ ಭವನ, ಗ್ರಾಮ ಗಂಗೋತ್ರಿ ಆವರಣ, ನಾಗಾವಿ ಗದಗ-582103**
ದೂ: 08372-200920, 200922

**ಟೆಂಡರ್ ಪ್ರಕಟಣೆ**

ವಿಶ್ವವಿದ್ಯಾಲಯದ ಆವರಣದಲ್ಲಿ ಹಲವು ಕಾಮಗಾರಿಗಳ ಟೆಂಡರ್ ಪ್ರಕಟಣೆ ಹೊರಡಿಸಲಾಗಿದೆ. ಅವುಗಳ ವಿವರಗಳು ಈ ಕೆಳಗಿನಂತಿವೆ.

| ಕ್ರ. ಸಂ | ಕಾಮಗಾರಿ ಹೆಸರು | ಟೆಂಡರ್‌ಗಿಟ್ಟ ಮೊತ್ತ (ರೂ.ಗಳಲ್ಲಿ) | ಟೆಂಡರ್ ದಸ್ತಾವೇಜು ಮೊತ್ತ (ರೂ.ಗಳಲ್ಲಿ) | ಇ.ಎಂ.ಡಿ ಮೊತ್ತ (ರೂ.ಗಳಲ್ಲಿ) |
|---|---|---|---|---|
| 1 | ಮಹಾತ್ಮ ಗಾಂಧಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದ ಆವರಣದಲ್ಲಿ ಕಳಸಾಪೂರ ಗ್ರಾಮದ ವ್ಯಾಪ್ತಿಗೆ ಬರುವ ರಿ. ಸ. ನಂ: 179/B/1ರಲ್ಲಿರುವ Sankalpa Rural Development Society ಗೆ ನೀಡಲಾದ ಜಮೀನಿಗೆ ಹೊಂದಿಕೊಂಡಿರುವ ಕರ್ನಾಟಕ ಗೃಹ ಮಂಡಳಿ ನಿವೇಶನಗಳಿಂದ ಸದರಿ ಜಮೀನಿನ ಮುಖ್ಯ ದ್ವಾರದವರೆಗೆ ವಿದ್ಯುತ್ ಸಂಪರ್ಕ ಕಲ್ಪಿಸುವ ಕಾಮಗಾರಿ | 1,63,295.97/- | 1,050/- | 4,100/- |
| 2 | ವಿಶ್ವವಿದ್ಯಾಲಯದ ಆವರಣದಲ್ಲಿ ಅಧ್ಯಯನ ಶಾಲೆ-1ರ ಹಿಂಭಾಗದಲ್ಲಿರುವ ವಿದ್ಯುತ್ ಪರಿವರ್ತಕದಿಂದ ಜೈವಿಕ ಇಂಧನ ಘಟಕದ ಹತ್ತಿರವಿರುವ ವಿದ್ಯುತ್ ಪರಿವರ್ತಕಕ್ಕೆ ವಿದ್ಯುತ್ ಸಂಪರ್ಕವನ್ನು ಕಲ್ಪಿಸುವ ಕಾಮಗಾರಿ | 3,22,768/- | 1,050/- | 8,100/- |
| 3 | ವಿಶ್ವವಿದ್ಯಾಲಯ ಆವರಣದ ಮುಖ್ಯ ದ್ವಾರದಿಂದ Junction-1ರವರೆಗೆ ಸಂಪರ್ಕ ಕಲ್ಪಿಸುವ ರಸ್ತೆಗೆ ವಿದ್ಯುತ್ ಬೀದಿ ದೀಪಗಳನ್ನು ಅಳವಡಿಸುವ ಕಾಮಗಾರಿ | 4,19,148.28/- | 1,050/- | 10,500/- |

ಮೇಲಿನ ಕೋಷ್ಟಕದಲ್ಲಿ ವಿವರಿಸಿದಂತೆ ಸದರಿ ಕಾಮಗಾರಿಗೆ ನಿಗದಿತ ನಮೂನೆ KW-1 ರನ್ವಯ ಟೆಂಡರ್ ಆಹ್ವಾನಿಸಲಾಗಿದೆ. ಟೆಂಡರ್‌ದಾರರು ವಿಶ್ವವಿದ್ಯಾಲಯದ ಕಚೇರಿಯಿಂದ ಟೆಂಡರ್ ದಾಸ್ತಾವೇಜು ಪಡೆದು ವೇಳಾ ಪಟ್ಟಿಯಂತೆ ಟೆಂಡರ್ ಸಲ್ಲಿಸಬಹುದಾಗಿದೆ.

**ವಿ.ಸೂ: 1)** GST ಮೊತ್ತವನ್ನು ಪ್ರತ್ಯೇಕವಾಗಿ ನೀಡಲಾಗುವುದು. (as per Government Orders)

**ಹೆಚ್ಚಿನ ವಿವರಗಳಿಗಾಗಿ ಇಂಜನೀಯರಿಂಗ್ ವಿಭಾಗ, ಮ.ಗಾ.ಗ್ರಾ.ಅ. ಮತ್ತು ಪಂ.ರಾ. ವಿಶ್ವವಿದ್ಯಾಲಯ, ನಾಗಾವಿ, ಗದಗ ಇಲ್ಲಿ ಸಂಪರ್ಕಿಸಿರಿ.**

(1) ಟೆಂಡರ್ ಸಲ್ಲಿಸಲು ಪ್ರಾರಂಭ **ದಿನಾಂಕ : 26-07-2025, 11.00am onwards**

(2) ಟೆಂಡರ್ ಸಲ್ಲಿಸಲು ಕೊನೆಯ **ದಿನಾಂಕ : 04-08-2025, upto 03.00pm**

(3) ಟೆಂಡರ್ ತೆರೆಯುವ **ದಿನಾಂಕ : 04-08-2025, after 04.00pm** ಪ್ರಸ್ತುತ ಹಾಜರಿದ್ದ ಗುತ್ತಿಗೆದಾರರ ಸಮ್ಮುಖದಲ್ಲಿ ಟೆಂಡರ್ ತೆರೆಯಲಾಗುವುದು.

ವಾ.ಸಾ.ಇ/ಗದಗ/199/ದೇಶಪಾಂಡೆಪಬ್ಲಿಸಿಟಿ/2025-26

ಸಹಿ/- ಕುಲಸಚಿವರು

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka